ಸಂಪುಟ : 9 ಸಂಚಿಕೆ 282 ಪುಟ : 4 ಬೆಲೆ: 3.00 ಶನಿವಾರ ಡಿಸೆಂಬರ್ 21 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 282 Pages : 4 Price : 3.00 Saturday December 21 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕೇಂದ್ರ ಸಚಿವ ಅಮಿತ್ ಶಾ, ಎಂಎಲ್‌ಸಿ ಸಿ.ಟಿ. ರವಿ ಹೇಳಿಕೆ ಖಂಡಿಸಿ ಕಾಂಗ್ರೆಸ್‌ನಿಂದ ಪ್ರತಿಭಟನೆ


# ಬಿಜೆಪಿ ನಾಯಕರಿಗೆ ಸಮಾನತೆ ಬೇಕಾಗಿಲ್ಲ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆ ಹಾಗೂ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರ ಹೇಳಿಕೆಗಳನ್ನು ಖಂಡಿಸಿ ಜಿಲ್ಲಾ ಕಾಂಗ್ರೆಸ್ ಕಾರ್ಯಕರ್ತರು ಶುಕ್ರವಾರ ಗದುಗಿನ ಮಹಾತ್ಮ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯ ಮುಂದಾಳತ್ವ ವಹಿಸಿದ್ದ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹಾಗೂ ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ಬಿಜೆಪಿ ಎಂದಿಗೂ ಸಂವಿಧಾನ ವಿರೋಧಿ ಪಕ್ಷವಾಗಿದೆ. ಬಿಜೆಪಿ ಪಕ್ಷವನ್ನು ಪ್ರತಿನಿಧಿಸುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಾತನಾಡುವ ಭರದಲ್ಲಿ ಸಂವಿಧಾನ ಶಿಲ್ಪಿ ಡಾ. ಅಂಬೇಡ್ಕರರನ್ನು ಅವಮಾನಿಸಿದ್ದಾರೆ. ದೇಶಕ್ಕೆ ಪವಿತ್ರವಾದ ಸಂವಿಧಾನವನ್ನು ನೀಡಿದ ಅಂಬೇಡ್ಕರ್ ಹೆಸರನ್ನು ಜಪ ಮಾಡುವುದರಲ್ಲಿ ಯಾವುದೇ ತಪ್ಪಿಲ್ಲ. ಕಾಂಗ್ರೆಸ್ ಅಂಬೇಡ್ಕರ್ ಹೆಸರನ್ನು ನಿರಂತರವಾಗಿ ಜಪಿಸಲಿದೆ. ಆದರೆ ಜನ ಎಚ್ಚೆತ್ತುಕೊಳ್ಳಬೇಕು. ಇಂಥಹ ಸಂವಿಧಾನ ವಿರೋಧಿ ಪಕ್ಷಕ್ಕೆ ತಕ್ಕ ಪಾಠ ಕಲಿಸಬೇಕಾಗಿದೆ ಎಂದರು.

ಬುದ್ಧ, ಬಸವಣ್ಣನವರು ಸಾರಿದ ಸಮಾನತೆಯ ಸಂದೇಶವನ್ನೇ ಡಾ. ಅಂಬೇಡ್ಕರ್ ಪ್ರತಿಪಾದಿಸಿದ್ದಾರೆ. ಸಂವಿಧಾನದಲ್ಲಿಯೂ ಅದನ್ನೇ ಉಲ್ಲೇಖಿಸಿದ್ದಾರೆ. ಆದರೆ ಬಿಜೆಪಿ ನಾಯಕರಿಗೆ ಸಮಾನತೆಯ ಅಗತ್ಯವಿಲ್ಲ. ದೇಶದ ಜನ ಶಾಂತಿ, ಸೌಹಾರ್ದಯುತ ಬದುಕು ನಡೆಸುವುದು ಬೇಕಾಗಿಲ್ಲ. ಇಂಥಹ ಸಂವಿಧಾನ ವಿರೋಧಿ ಮನಸ್ಥಿತಿಯನ್ನು ಹೊಂದಿರುವ ಅಮಿತ್ ಶಾ ಕೂಡಲೇ ತಮ್ಮ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು ಎಂದು ಒತ್ತಾಯಿಸಿದರು.



ಇನ್ನು ರಾಜ್ಯದಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಮಾತನಾಡಿದ ಭಾಷೆ, ಬಳಸಿದ ಶಬ್ಧಗಳಿಂದ ರಾಜಕಾರಣಿಗಳೆಲ್ಲರೂ ತಲೆ ತಗ್ಗಿಸುವಂತಾಗಿದೆ. ಸಿ.ಟಿ. ರವಿ ಹೇಳಿಕೆ ಭವಿಷ್ಯದ ರಾಜಕಾರಣಿಗಳ ಮೇಲೆ ಯಾವ ರೀತಿ ಪ್ರಭಾವ ಬೀರುತ್ತದೆ ಎನ್ನುವುದನ್ನು ಅರ್ಥ ಮಾಡಿಕೊಳ್ಳಬೇಕು. ಈ ಕೂಡಲೇ ಸಿ.ಟಿ. ರವಿ ಅವರ ಪರಿಷತ್ ಸದಸ್ಯತ್ವನ್ನು ರದ್ದು ಮಾಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಕಾಂಗ್ರೆಸ್ ಪಕ್ಷದ ಪ್ರಮುಖರಾದ ಬಿ.ಬಿ. ಅಸೂಟಿ, ಮಿಥುನ್ ಪಾಟೀಲ, ಅಶೋಕ ಮಂದಾಲಿ, ಟಿ. ಈಶ್ವರ, ಸುಜಾತಾ ದೊಡ್ಡಮನಿ, ವಿ.ಬಿ. ಸೋಮನಕಟ್ಟಿಮಠ, ಉಮರ ಫಾರೂಕ್ ಹುಬ್ಬಳ್ಳಿ ಮುಂತಾದವರು ಉಪಸ್ಥಿತರಿದ್ದರು.

> ಬಿಜೆಪಿ ನಾಯಕರು ಗದಗ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಘೇರಾವ್ ಹಾಕುವ ಯತ್ನದಲ್ಲಿದ್ದಾರೆ. ಇವರೆಲ್ಲರೂ ಯಾವ ಕಾರಣಕ್ಕೆ ಘೇರಾವ್ ಹಾಕುತ್ತಿದ್ದಾರೆ? ಸಿ.ಟಿ. ರವಿ ಮತ್ತು ಅಮಿತ್ ಶಾ ಹೇಳಿಕೆಯನ್ನು ಸಮರ್ಥನೆ ಮಾಡಿಕೊಂಡು ಬಂದಿದ್ದಾರೆ, ಕಾಂಗ್ರೆಸ್ ಇರುವವರೆಗೂ ಸಂವಿಧಾನಕ್ಕೆ ಅಪಚಾರವಾಗಲು ಬಿಡುವುದಿಲ್ಲ.
>
> **– ಜಿ.ಎಸ್. ಪಾಟೀಲ.**
>
> ಶಾಸಕರು, ಕಾಂಗ್ರೆಸ್ ಜಿಲ್ಲಾಧ್ಯಕ್ಷರು.




## ವಿಶೇಷ ನಿರ್ಣಯ, ಹೊಸ ದಾಖಲೆ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ**

ಬೆಳಗಾವಿಯಲ್ಲಿ 1924ರಲ್ಲಿ ನಡೆದ ಭಾರತ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಹಿನ್ನೆಲೆಯಲ್ಲಿ ಅಧಿಕೃತ ನಿರ್ಣಯವನ್ನು ಡಿ.19ರಂದು ಸದನದಲ್ಲಿ ಮಂಡಿಸಿ ಸರ್ವಾನುಮತದಿಂದ ಅಂಗೀಕರಿಸಲಾಗಿದೆ ಎಂದು ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ತಿಳಿಸಿದರು.

ವಿಧಾನಸಭೆಯಲ್ಲಿ ಡಿ.19ರಂದು ಕೊನೆಯ ದಿನದ ಅಧಿವೇಶನದ ಕಾರ್ಯಕಲಾಪ ಕುರಿತು ವಿವರಿಸಿದ ಅವರು, ಬೆಳಗಾವಿಯ ಸುವರ್ಣವಿಧಾನ ಸೌಧದಲ್ಲಿ ಪ್ರಥಮ ಬಾರಿಗೆ ತಡರಾತ್ರಿಯವರೆಗೆ ಅಧಿವೇಶನ ನಡೆಸಿ ಹೊಸ ದಾಖಲೆ ನಿರ್ಮಿಸಲಾಗಿದೆ ಎಂದು ವಿವರಿಸಿದರು.

ಸುವರ್ಣ ವಿಧಾನಸೌಧದ ವಿಧಾನಸಭೆಯ ಸಭಾಂಗಣದಲ್ಲಿ ಭಾರತ ದೇಶದ ಸಂವಿಧಾನ ರಚನಾ ಸಭೆಯ ಅಧ್ಯಕ್ಷರು ಹಾಗೂ ದೇಶದ ಪ್ರಥಮ ರಾಷ್ಟ್ರಪತಿ ಡಾ.ಬಾಬು ರಾಜೇಂದ್ರ ಪ್ರಸಾದ್, ದೇಶದ ಪ್ರಥಮ ಪ್ರಧಾನಿ ಪಂಡಿತ್ ಜವಹರ್‌ಲಾಲ್ ನೆಹರು, ಸ್ವಾತಂತ್ರ್ಯ ಹೋರಟಗಾರರು, ದೇಶದ ಪ್ರಥಮ ಶಿಕ್ಷಣ ಸಚಿವರಾದ ಮೌಲಾನಾ ಅಬುಲ್ ಕಲಾಂ ಅಜಾದ್ ಮತ್ತು ದೇಶದ ಪ್ರಥಮ ಮಹಿಳಾ ಪ್ರಧಾನಿ ಶ್ರೀಮತಿ ಇಂದಿರಾ ಗಾಂಧಿ ಅವರುಗಳ ಕಲಾಕೃತಿಗಳನ್ನು ಡಿ.16ರಂದು ಅನಾವರಣಗೊಳಿಸಲಾಯಿತು ಹಾಗೂ ಮರುವಿನ್ಯಾಸಗೊಂಡ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್, ತತ್ವಜ್ಞಾನಿಗಳಾದ ಸ್ವಾಮಿ ವಿವೇಕಾನಂದ, ಅಪ್ರತಿಮ ಸ್ವಾತಂತ್ರ್ಯ ಹೋರಟಗಾರ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ವರ್ಣ ಚಿತ್ರಗಳನ್ನು ಸಹ ಅನಾವರಣಗೊಳಿಸಲಾಗಿದೆ ಎಂದು ಸಭಾಧ್ಯಕ್ಷರು ವಿವರಿಸಿದರು.

## ಇಂದಿನ ನೀರು ಪೂರೈಕೆ ವಿವರ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರದಲ್ಲಿ ಡಿಸೆಂಬರ್-21 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 16, 21 – ರಹಮತ್ ನಗರ 4 ಭಾಗಗಳು, ಗುಡದೂರ ಸ್ವಾಮಿ ಮಠದ ಎಡಭಾಗ, ಬಲಭಾಗ, ಅಬ್ಬಿಗೇರಿ ಲೈನ್, ಗಂಗಿಮಡಿ ಹೊಸ ಲೈನ್, ಕುಂಬೇಶ್ವರ ನಗರದ 4 ಭಾಗಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 22 – ಗಂಗಿಮಡಿ, ಅಮರೇಶ್ವರ ನಗರ, ತಾಜನಗರ ಉಳಿದ ಕೆಲವು ಭಾಗಗಳು.

ವಾರ್ಡ್ ನಂ 29 – ಟೀಚರ್ಸ್ ಕಾಲೋನಿ ಪೂರ್ತಿ ಭಾಗಗಳು. ವಾರ್ಡ್ ನಂ.11 – ನಿಸರ್ಗ ಬಡಾವಣೆ, ಶಿವ ಬಸವನಗರ ರಿಂಗ್ ರೋಡ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 7 – ಪಂಚಲಕ್ಷ್ಮೀ ಬಡಾವಣೆ, ಶಿವಾಜಿ ನಗರದ ಪೂರ್ತಿ ಭಾಗಗಳು ಉಳಿದ ಕೆಲವು ಭಾಗಗಳು. ವಾರ್ಡ್ 1 – ಎಸ್ ಎಮ್ ಕೃಷ್ಣ ನಗರ ಪೂರ್ತಿ ಭಾಗಗಳು.

ಪ್ರಕಟಣೆ: ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತಮ್ಮ ನೀರಿನ ಕರವನ್ನು ತುಂಬಲು ತಿಳಿಸಲಾಗಿದೆ. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ್ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುತ್ತದೆ. ಆದ ಕಾರಣ ನೀರಿನ ಕರವನ್ನು ತುಂಬಲು ಗದಗ-ಬೆಟಗೇರಿ ನಗರಸಭೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಕಾಂಗ್ರೆಸ್ ಜಿಲ್ಲಾ ಕಚೇರಿ ಎದುರು ಬಿಜೆಪಿ ಜಿಲ್ಲಾ ಯುವ ಮೋರ್ಚಾ ವತಿಯಿಂದ ಪ್ರತಿಭಟನೆ

# ಅಮಿತ್ ಶಾ ಹೇಳಿಕೆ ತಿರುಚಲಾಗಿದೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಹೇಳಿಕೆಯ ತುಣುಕನ್ನು ಸಂಪೂರ್ಣ ತಿರುಚಿ ಇಲ್ಲದ ಆರೋಪ ಹೊರಿಸಲಾಗಿದೆ ಎಂದು ಹಾಗೂ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿಯವರ ಬಂಧನ ಖಂಡಿಸಿ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಯುವ ಮೋರ್ಚಾ ವತಿಯಿಂದ ಗದಗ ನಗರದ ಕಾಂಗ್ರೆಸ್ ಜಿಲ್ಲಾ ಕಚೇರಿ ಎದುರಿಗೆ ಪ್ರತಿಭಟನೆ ನಡೆಸಿದರು.

ಯುವ ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಮಾತನಾಡಿ, ಕೇಂದ್ರ ಗೃಹ ಸಚಿವರಾದ ಅಮಿತ್ ಶಾ ಅವರು ಸಂಸತ್ತಿನಲ್ಲಿ ಡಾ. ಬಾಬಾಸಾಹೇಬ್ ಅಂಬೇಡ್ಕರ್‌ರ ಕುರಿತು ಮಾತನಾಡುವಾಗ ಅವರ ಹೇಳಿಕೆಯ ಭಾಷಣದ ತುಣುಕನ್ನು ತಪ್ಪಾಗಿ ಅರ್ಥ ಬರುವ ಹಾಗೆ ತಿರುಚಿದ್ದು ಖಂಡನೀಯ. ಡಾ. ಬಿ.ಆರ್. ಅಂಬೇಡ್ಕರರು 1952ರಲ್ಲಿ ಮುಂಬೈ ಉತ್ತರ ಕ್ಷೇತ್ರದಿಂದ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿದಾಗ ಅವರ ವಿರುದ್ಧ ಪ್ರಚಾರ ಮಾಡಿ ಅವರನ್ನು ಸೋಲಿಸಿದ್ದು ಇದೇ ಕಾಂಗ್ರೆಸ್ ಪಕ್ಷ. ಅಂಬೇಡ್ಕರರ ಬಗ್ಗೆ ಭಾರತೀಯ ಜನತಾ ಪಾರ್ಟಿಗೆ ಅಪಾರ ಗೌರವವಿದ್ದು, ಭಾರತದ ಹೆಮ್ಮೆಯ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಅಂಬೇಡ್ಕರರ 5 ಪ್ರಮುಖ ಕ್ಷೇತ್ರಗಳನ್ನು ಅಭಿವೃದ್ಧಿಪಡಿಸಿದ್ದಾರೆ. ಇದು ಅಂಬೇಡ್ಕರರ ಕುರಿತು ಬಿಜೆಪಿಗೆ ಇರುವ ಗೌರವ. ಕಾಂಗ್ರೆಸ್‌ನವರು ಅಂಬೇಡ್ಕರರ ಹೆಸರನ್ನು ಕೇವಲ ಮತಬ್ಯಾಂಕಿಗಾಗಿ ಬಳಸಿಕೊಳ್ಳುತ್ತಿದೆ. ಅವರ ಸಾವಿನ ಸಂದರ್ಭದಲ್ಲಿ ಅವರ ಅಂತ್ಯಕ್ರಿಯೆಗೂ ಸ್ಥಳವನ್ನು ನೀಡದ ಕಾಂಗ್ರೆಸ್ ಅಗೌರವ ತೋರಿಸಿದ್ದು ದೇಶದ ಜನತೆಗೆ ಗೊತ್ತಿರುವ ಸಂಗತಿ ಎಂದರು.




ಈ ಸಂದರ್ಭದಲ್ಲಿ ಗದಗ ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ, ಪ್ರಮುಖರಾದ ಅಶೋಕ ಸಂಕಣ್ಣವರ, ಉಮೇಶ ಚನ್ನುಪಾಟೀಲ, ಪ್ರಕಾಶ ಕೊತಂಬರಿ, ನವೀನ ಕೊಟೆಕಲ್, ಶಿವು ಗೊಟೂರ, ಸುರೇಶ ಚವ್ಹಾಣ, ನವೀನ ಕುರ್ತಕೋಟಿ, ಪ್ರವೀಣ ಹಡಪದ, ವಿನಾಯಕ ಹರಕೇರಿ, ಸಚಿನ್ ಮಡಿವಾಳರ, ಗೋಪಾಲ ಗಡ್ಡದವರ, ಮಾಂತೇಶ ಬಾತಾಖಾನಿ, ಅರುಣ ಹುಲ್ಲೂರ, ರವಿ ಮಾನ್ವಿ, ಯೋಗೇಶ್ವರಿ ಭಾವಿಕಟ್ಟಿ, ಸಂತೋಷ ಮುಳ್ಳಾಳ, ರಾಹುಲ ಸಂಕಣ್ಣವರ ಮುಂತಾದವರಿದ್ದರು.

> ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ ಮಾತನಾಡಿ, ಚಳಿಗಾಲದ ಅಧಿವೇಶನದಲ್ಲಿ ನಡೆಯಬೇಕಾದ ಉತ್ತರ ಕರ್ನಾಟಕದ ಅಭಿವೃದ್ಧಿಯ ಬಗ್ಗೆ ಇದ್ದ ವಿಷಯಗಳನ್ನು ಮರೆಮಾಚಿ, ರಾಜ್ಯ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳನ್ನು ಮರೆಮಾಚಲು ಸರ್ಕಾರದ ಸಚಿವರುಗಳೇ ಕುಮ್ಮಕ್ಕು ನೀಡಿ ಜನರ ಅಭಿವೃದ್ಧಿ ವಿಚಾರಗಳನ್ನು ದಿಕ್ಕು ತಪ್ಪಿಸಲು ಹೊರಟಿದೆ. ಇದು ರಾಜ್ಯದ ಜನತೆಗೆ ಗೊತ್ತಿರುವ ಸಂಗತಿ. ಸುವರ್ಣಸೌಧದಲ್ಲಿ ನಡೆದ ಘಟನೆಯಿಂದ ವಿರೋಧ ಪಕ್ಷದ ನಾಯಕರನ್ನು ನಡೆಸಿಕೊಳ್ಳುವ ರೀತಿ ಸಾಬೀತಾಗಿದೆ ಎಂದರು.

### ರಸ್ತೆ ಸುರಕ್ಷತಾ ಅಭಿಯಾನದಲ್ಲಿ ಪಿಎಸ್‌ಐ ನಾಗರಾಜ ಗಡಾದ

# ಕಾನೂನುಗಳು ಜೀವ ಉಳಿಸುವ ಮಾರ್ಗಗಳು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗದಗ ಜಿಲ್ಲಾ ಪೊಲೀಸ್, ಗದಗ ಉಪವಿಭಾಗ, ಶಿರಹಟ್ಟಿ ವೃತ್ತ ಹಾಗೂ ಪಟ್ಟಣದ ಪೊಲೀಸ್ ಠಾಣೆಯ ವತಿಯಿಂದ ಹಮ್ಮಿಕೊಂಡಿದ್ದ ಅಪರಾಧ ತಡೆ ಮಾಸಾಚರಣೆ ಮತ್ತು ರಸ್ತೆ ಸುರಕ್ಷತಾ ಅರಿವು ಅಭಿಯಾನದಲ್ಲಿ ಸರಕಾರಿ ಪ್ರಾಥಮಿಕ ಶಾಲೆ ನಂ.4ರ ವಿದ್ಯಾರ್ಥಿಗಳು ಪಾಲ್ಗೊಂಡು ಜಾಗೃತಿ ಮೂಡಿಸಿದರು.

ಶಾಲಾ ಮಕ್ಕಳು ರಸ್ತೆ ಸುರಕ್ಷತೆಯ ಘೋಷಣೆಗಳನ್ನು ಮೊಳಗಿಸಿದರು. ಹೆಲ್ಮೆಟ್ ಧರಿಸಿ, ಸೀಟ್ ಬೆಲ್ಟ್ ಧರಿಸಿ ಜೀವ ಉಳಿಸಿ, ಅತಿವೇಗ ಅಪಾಯಕ್ಕೆ ಆಹ್ವಾನ, ವಾಹನಗಳ ಚಲಾವಣೆಯಲ್ಲಿ ರಸ್ತೆ ನಿಯಮಗಳನ್ನು ಪಾಲಿಸಿ ಎಂದು ಕೂಗಿದರು. ಪಂಪವೃತ್ತದ ಬಳಿ ಮಾನವ ಸರಪಳಿ ನಿರ್ಮಿಸಿ ಗಮನ ಸೆಳೆದರು.




ನಂತರ ಜಾಥವನ್ನು ಉದ್ದೇಶಿಸಿ ಮಾತನಾಡಿದ ಪಿಎಸ್‌ಐ ನಾಗರಾಜ ಗಡಾದ, ಕಾನೂನಿನ ಅರಿವಿನಿಂದ ಅಪರಾಧಗಳನ್ನು ತಡೆಗಟ್ಟಲು ಸಾಧ್ಯ. ಪ್ರತಿ ಗ್ರಾಮದಲ್ಲಿ ಜನಸ್ನೇಹಿ ಪೊಲೀಸರನ್ನು ನೇಮಕ ಮಾಡಿದ್ದು, ಅವರ ವಿಳಾಸ, ಫೋನ್ ನಂಬರ್ ನಿಮ್ಮ ಗ್ರಾಮದಲ್ಲೇ ಸಿಗುತ್ತದೆ. ಕಡ್ಡಾಯವಾಗಿ ಹೆಲ್ಮೆಟ್ ಧರಿಸುವುದು, ಕಾರು ಚಲಾಯಿಸುವಾಗ ಸೀಟ್ ಬೆಲ್ಟ್ ಧರಿಸುವುದು ಎಲ್ಲವೂ ಜೀವ ಉಳಿಸುವ ದಾರಿಗಳೇ ಹೊರತು ಕೇವಲ ಕಾನೂನುಗಳಲ್ಲ. ನಮ್ಮ ಜೀವವನ್ನು ಕಾಪಾಡಿಕೊಳ್ಳುವುದರ ಜೊತೆಗೆ ಇತರರ ಜೀವಕ್ಕೂ ಹಾನಿಯಾಗದಂತೆ ಎಚ್ಚರ ವಹಿಸಿ.

ದಾರಿಯಲ್ಲಿ ಮಕ್ಕಳು ಅಡ್ಡಾಡುವಾಗ, ಶಾಲಾ ಪ್ರದೇಶಗಳಲ್ಲಿ ವಾಹನಗಳನ್ನು ನಿಧಾನವಾಗಿ ಚಲಿಸಿ, ಜೀವ ಅತ್ಯಮೂಲ್ಯ ಎನ್ನುವದನ್ನು ಎಲ್ಲರೂ ಅರಿತುಕೊಂಡು ಪ್ರಯಾಣಿಸಿ. ರಸ್ತೆ ಸುರಕ್ಷತೆಗೆ ಅಪರಾಧ ತಡೆಗೆ ಸಾರ್ವಜನಿಕ ಸಹಕಾರ ಅಗತ್ಯ ಎಂದು ಸಲಹೆ ನೀಡಿದರಲ್ಲದೆ, ಮನೆಗಳ್ಳತನ, ವಾಹನ ಕಳ್ಳತನ ನಡೆಯುತ್ತಿದ್ದು, ಸಾರ್ವಜನಿಕರು ಮನೆಗಳಿಗೆ ಕೀಲಿ ಹಾಕಿ ಬೇರೆ ಕಡೆ ತೆರಳುವ ಸಂದರ್ಭದಲ್ಲಿ ಪೊಲೀಸರಿಗೆ ಮಾಹಿತಿ ನೀಡಿ ಅಪರಾಧಗಳನ್ನು ತಡೆಗಟ್ಟಲು ಪೊಲೀಸರೊಂದಿಗೆ ಸಹಕರಿಸಿ ಎಂದರು.

ಜಾಥಾದಲ್ಲಿ ಶಾಲಾ ಶಿಕ್ಷಕರು, ಪೊಲೀಸ್ ಸಿಬ್ಬಂದಿಗಳು, ಶಾಲಾ ವಿದ್ಯಾರ್ಥಿಗಳು, ಸಾರ್ವಜನಿಕರು ಪಾಲ್ಗೊಂಡಿದ್ದರು.

### ಅಂಬೇಡ್ಕರರ ಕುರಿತು ಅವಮಾನಕರ ಹೇಳಿಕೆ | ಅಮಿತ್ ಶಾ ವಜಾಕ್ಕೆ ದಲಿತ ಸಂಘರ್ಷ ಸಮಿತಿ ಆಗ್ರಹ

# ಅಮಿತ್ ಶಾ ದಲಿತ ವಿರೋಧಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಇತ್ತೀಚೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ರಾಜ್ಯಸಭೆಯಲ್ಲಿ ಅಂಬೇಡ್ಕರ್ರ ಕುರಿತು ಅವಮಾನಕರವಾಗಿ ಮಾತನಾಡಿರುವುದನ್ನು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಗದಗ ಜಿಲ್ಲಾ ಶಾಖೆ ತೀವ್ರವಾಗಿ ಖಂಡಿಸಿ, ಶುಕ್ರವಾರ ನಗರದ ಮಹಾತ್ಮ ಗಾಂಧಿ ಸರ್ಕಲ್‌ನಲ್ಲಿ ನೂರಾರು ಕಾರ್ಯಕರ್ತರು ಸೇರಿ ಅಮಿತ್ ಶಾ ವಿರುದ್ಧ ಘೋಷಣೆ ಕೂಗಿ, ಮಾನವ ಸರಪಳಿ ನಿರ್ಮಿಸಿ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕ ದುರಗಪ್ಪ ಹರಿಜನ ಮಾತನಾಡಿ, ಅಂಬೇಡ್ಕರರು ಬರೆದ ಸಂವಿಧಾನದ ಮೂಲಕ ಗೃಹ ಸಚಿವರಾಗಿರುವುದನ್ನು ಮರೆತು ಅಂಬೇಡ್ಕರರ ಬಗ್ಗೆ ಕೀಳಾಗಿ ಮಾತನಾಡಿರುವ ಅಮಿತ್ ಶಾ ಅವರು ಅಂಬೇಡ್ಕರ್ ಹಾಗೂ ದಲಿತ ವಿರೋಧಿಯಾಗಿದ್ದಾರೆ. ಅವರ ಮನುವಾದಿ ಸಂಸ್ಕೃತಿ ಇದರಿಂದ ಬಯಲಾಗಿದೆ ಎಂದರು.



> ವಿಭಾಗೀಯ ಸಂಚಾಲಕ ಶರಣು ಪೂಜಾರ, ಜಿಲ್ಲಾ ಸಂಘಟನಾ ಸಂಚಾಲಕ ಸತೀಶ ಹೂಲಿ, ಸುಜಾತ ದೊಡಮನಿ, ಭಾಷಾಸಾಬ ಮಲ್ಲಸಮುದ್ರ, ಬಸವರಾಜ ಕಡೇಮನಿ, ವಿನಾಯಕ ಬಳ್ಳಾರಿ, ಆರ್.ಎಲ್. ಮೇಳೆನ್ನವರ ಅಮಿತ ಶಾ ಅವರನ್ನು ಕೂಡಲೇ ಸಂಪುಟದಿಂದ ವಜಾ ಮಾಡಲು ಆಗ್ರಹಿಸಿದರು.

ರಾಜ್ಯ ಸಂಘಟನಾ ಸಂಚಾಲಕ ಎಸ್.ಎನ್. ಬಳ್ಳಾರಿ ಮಾತನಾಡಿ, ಅಂಬೇಡ್ಕರರು ಕೊಟ್ಟ ಸಂವಿಧಾನ ನಮ್ಮಂತಹ ಕೋಟಿ ಕೋಟಿ ಜನತೆಗೆ ಬೆಳಕಾಗಿರುವುದು ಸತ್ಯ. ಕೀಳಾಗಿ ಮಾತನಾಡಿದ ಅಮಿತ್ ಶಾ ವಿರುದ್ಧ ಪ್ರಕರಣ ದಾಖಿಸಿಲಿ, ಅವರನ್ನು ಸಂಪುಟದಿಂದ ವಜಾ ಮಾಡಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಪ್ರಮುಖರಾದ ಮಾರುತಿ ಗುಡಿಮನಿ, ಕೃಷ್ಣಾ ಪೂಜಾರ, ಜಿಲ್ಲಾ ಸಂಘಟನಾ ಸುಭಾಸ ದೊಡ್ಡಮನಿ, ಕೆಂಚಪ್ಪ ಪೂಜಾರ, ಸೋಮು ಲಮಾಣಿ, ಆಂಜನೇಯ ಕಟಗಿ, ಶಿವಪುತ್ರಪ್ಪ ತಿಮ್ಮಾಪೂರ, ವಿಶಾಲ ಗೋಶಲ್ಯನವರ, ಚಂದ್ರು ಗುತ್ತಿ, ಧರ್ಮಣ್ಣ ಹೊಸಮನಿ, ಮಂಜು ಕೊರವರ, ಹೊನ್ನಪ್ಪ ಸಾಕಿ, ಹರೀಶ ಬಾವಿಮನಿ, ಮೈಲಾರಪ್ಪ ಚಳ್ಳಮರದ, ಮುತ್ತು ಪೂಜಾರ, ನೀಲಪ್ಪ ಗಜೇಂದ್ರಗಡ, ಪರಶುರಾಮ ಪೂಜಾರ, ಶಿವು ಕೊಟ್ನಿಕಲ್, ಸುಭಾಸ ದೊಡಮನಿ, ರಮೇಶ ಮ್ಯಾಗೇರಿ, ಪರಶುರಾಮ ದೊಡಮನಿ, ನಾಗರಾಜ ಗುತ್ತಿ, ಮುತ್ತು ಅಸುಂಡಿ, ಫಕೀರೇಶ ಕಣವಿ, ವಿನಾಯಕ ಕಲ್ಮನಿ, ಶಂಕರ ಹರಿಜನ ಮುಂತಾದವರಿದ್ದರು.

## ಸಂಪಾದಕೀಯ

# ಸಂಘ ಪರಿವಾರ ಮೋಹನ ಭಾಗವತ್ ಸಲಹೆ ಪಾಲಿಸಲಿ

ರಾಷ್ಟ್ರೀಯ ಸ್ವಯಂಸೇವಕ ಸಂಘದ ಮುಖ್ಯಸ್ಥ ಮೋಹನ ಭಾಗವತ್ ಅವರು, ದೇಶದಲ್ಲಿ ಸಾಮರಸ್ಯ ಮೂಡಬೇಕು. ವಿವಿಧತೆಯಲ್ಲಿ ಭಾರತದ ಏಕತೆ ಪ್ರತಿಪಾದಿಸಬೇಕು ಎಂದು ಹಿಂದೂ ನಾಯಕರ ಕುರಿತಾಗಿ ಹೇಳಿಕೆ ನೀಡಿದ್ದಾರೆ. ಅದಕ್ಕೂ ಮೊದಲು ಜನಸಂಖ್ಯಾ ಅಧ್ಯಯನ ಪ್ರಕಾರ ಸಮಾಜದಲ್ಲಿ ಫಲವಂತಿಕೆ ದರ 2.1ಕ್ಕಿಂತ ಕಡಿಮೆಯಾದರೆ ದೇಶಕ್ಕೆ ಅಪಾಯ. ಆ ಕಾರಣಕ್ಕಾಗಿ ದೇಶದ ಪ್ರತಿಯೊಂದು ಕುಟುಂಬ ಕನಿಷ್ಠ 3 ಮಕ್ಕಳನ್ನು ಹೊಂದಬೇಕು ಎನ್ನುವ ಸಲಹೆ ನೀಡಿದ್ದಾರೆ.

ಮೋಹನ ಭಾಗವತ್ ಅವರ ಈ ಎರಡೂ ಹೇಳಿಕೆಗಳನ್ನು ಗಮನಿಸಿದಾಗ, ಸದ್ಯದ ಸಂಘ ಪರಿವಾರದ ಆಶಯಕ್ಕೂ ಮೋಹನ್ ಭಾಗವತ್ ನೀಡುತ್ತಿರುವ ಹೇಳಿಕೆಗಳಿಗೂ ಒಂಚೂರು ತಾಳೆಯಾಗುವುದಿಲ್ಲ. ದೇಶದಲ್ಲಿ ಜನಸಂಖ್ಯೆ ನಿಯಂತ್ರಣ ಆಗಬೇಕು ಎಂದು ಆರ್ ಎಸ್ ಎಸ್ ಅನೇಕ ಮುಖಂಡರು ಅಭಿಪ್ರಾಯ ಪಟ್ಟಿದ್ದಾರೆ. ಅದರಲ್ಲೂ ಅಲ್ಪಸಂಖ್ಯಾತರ ಜನಸಂಖ್ಯೆ ನಿಯಂತ್ರಣಕ್ಕೆ ಕಾನೂನು ಜಾರಿ ಮಾಡಬೇಕು ಎನ್ನುವ ಹಕ್ಕೊತ್ತಾಯಗಳು ವ್ಯಕ್ತವಾದ ಸಂದರ್ಭದಲ್ಲಿ ಮೋಹನ ಭಾಗವತ್ ಹೇಳಿಕೆ ಅಚ್ಚರಿ ಮೂಡಿಸುತ್ತದೆ.

ಇನ್ನು ಹಿಂದೂ ನಾಯಕರು ರಾಮ ಮಂದಿರದಂತಹ ವಿವಾದಗಳನ್ನು ಪ್ರಚೋದಿಸುವುದು ಸರಿಯಲ್ಲ ಎನ್ನುವ ಹೇಳಿಕೆ ಗಮನಿಸಿದಲ್ಲಿ ನಿಜವಾಗಿಯೂ ಆರ್ ಎಸ್ ಎಸ್ ಮುಖಂಡರೊಬ್ಬರು ಈ ರೀತಿ ಹೇಳಲು ಸಾಧ್ಯವೇ ಎನ್ನುವ ಬಗ್ಗೆ ಅನುಮಾನಗಳು ಮೂಡುತ್ತವೆ. ಮುಂದುವರಿದು, ನಾವು ಬಹಳ ಸಮಯದಿಂದ ಸಾಮರಸ್ಯದಿಂದ ಬದುಕುತ್ತಿದ್ದೇವೆ. ಈ ಸೌಹಾರ್ದತೆಯನ್ನು ನಾವು ಜಗತ್ತಿಗೆ ಒದಗಿಸಬೇಕಾಗಿದೆ. ರಾಮ ಮಂದಿರ ನಿರ್ಮಾಣ ನಂತರ ಅದೇ ರೀತಿಯ ಸಮಸ್ಯೆಗಳನ್ನು ಎತ್ತಿಹಿಡಿಯುವ ಮೂಲಕ ಹಿಂದೂಗಳ ನಾಯಕರಾಗಬೇಕು ಎಂದು ಹವಣಿಸುತ್ತಿರುವುದು ಸ್ವೀಕಾರಾರ್ಹವಲ್ಲ ಎಂದಿರುವುದು ನಿಜವಾಗಿಯೂ ಭಾಗವತ್ ಅವರ ಬಗ್ಗೆ ಚಿಂತನೆಗೆ ಕಾರಣವಾಗಿದೆ.

ಭಾಗವತ್ ಅವರ ಈ ಎರಡು ಹೇಳಿಕೆ ಮಾತ್ರವಲ್ಲ, ದೇಶದಲ್ಲಿ ಮೀಸಲಾತಿ ವ್ಯವಸ್ಥೆಯನ್ನು ನಾವು ವಿರೋಧಿಸುವುದಿಲ್ಲ ಎಂದಿದ್ದರು. ಒಂದು ಕಡೆ ಸಂಘ ಪರಿವಾರ ಮತ್ತು ಬಿಜೆಪಿ, ಜಾತಿ ಆಧಾರಿತ ಮೀಸಲಾತಿ ವ್ಯವಸ್ಥೆಗೆ ವಿರೋಧ ವ್ಯಕ್ತಪಡಿಸುತ್ತಿದ್ದರೆ, ಮತ್ತೊಂದೆಡೆ ಭಾಗವತ್ ಮೀಸಲಾತಿ ವಿರೋಧಿಸುವುದಿಲ್ಲ ಎನ್ನುವಂಥ ಹೇಳಿಕೆ ನೀಡಿದ್ದರು. ಭಾಗವತ್ ಯಾವ ಕಾರಣಕ್ಕೆ ಈ ರೀತಿ ಹೇಳಿಕೆ ನೀಡಿದರೊ ಅದು ಚರ್ಚೆಯ ವಿಷಯ ಅಲ್ಲ. ಆದರೆ ಸಂಘ ಪರಿವಾರ ಮತ್ತು ಬಿಜೆಪಿ ಅವರ ಸಲಹೆ ಪಾಲಿಸುತ್ತದೆಯೊ ಇಲ್ಲವೋ ಎನ್ನುವುದಷ್ಟೆ ಇಲ್ಲಿ ಮುಖ್ಯ.

## ಅವೈಜ್ಞಾನಿಕ ಒಳ ಮೀಸಲಾತಿ ವಿರೋಧಿಸಿ ಬೆಳಗಾವಿ ಸುವರ್ಣಸೌಧದೆದುರು ಪ್ರತಿಭಟನೆ

# 2011ರ ಜನಗಣತಿ ಆಧಾರದ ಮೇಲೆ ವರ್ಗೀಕರಣ ಬೇಡ



**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ಭೋವಿ, ಬಂಜಾರ, ಕೊರಮ, ಕೊರಚ ಜಾತಿಗಳ ಮಹಾ ಒಕ್ಕೂಟದಿಂದ 2011ರ ಜನಗಣತಿ ಆಧಾರದ ಮೇಲೆ ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ವಿಂಗಡನೆಗೆ ಮುಂದಾಗಿರುವ ರಾಜ್ಯ ಸರ್ಕಾರದ ನಡೆಯನ್ನು ಖಂಡಿಸಿ ಡಿ.17ರಂದು ಬೆಳಗಾವಿ ಸುವರ್ಣಸೌಧದ ಎದುರಿಗೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಯಿತು.

ಪ್ರತಿಭಟನೆಯಲ್ಲಿ ಇಲಕಲ್ ವಿಜಯ ಮಹಾಂತೇಶ್ವರ ಶಾಖಾಮಠ ಲಿಂಗಸೂರಿನ ಪರಮಪೂಜ್ಯ ಸಿದ್ದಲಿಂಗ ಮಹಾಸ್ವಾಮಿಗಳು, ಬಿಜಾಪೂರ ತೊರವಿ ತಾಂಡಾ ಬಂಜಾರ ಪೀಠದ ಗೋಪಾಲ ಮಹಾರಾಜರು, ಸಂಡೂರಿನ ಶ್ರೀ ತಿಪ್ಪೇಸ್ವಾಮಿ ಸ್ವಾಮೀಜಿಗಳು ದಿವ್ಯ ಸಾನ್ನಿಧ್ಯ ವಹಿಸಿದ್ದರು.

ಗೊರಸೇನಾ ಸಂಘಟನೆಯ ರಾಜಾಧ್ಯಕ್ಷ ರವಿಕಾಂತ ಅಂಗಡಿ ಮಾತನಾಡಿ, ಸರ್ಕಾರ ಸರಿಯಾಗಿ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ, ರಾಜಕೀಯ ಸಮೀಕ್ಷೆ ಮಾಡಬೇಕು. ಇದಾವುದನ್ನು ಪರಿಗಣಿಸದೆ ಈ ಹಿಂದಿನ 2011ರ ಜನಗಣತಿ ಆಧಾರದ ಮೇಲೆ ಒಳಮೀಸಲಾತಿ ವರ್ಗೀಕರಣ ಮಾಡಬಾರದು. 2024ರ ಜನಸಂಖ್ಯೆಗೆ ಅನುಗುಣವಾಗಿ 99 ಪರಿಶಿಷ್ಟ ಜಾತಿಗಳ ಸಹೋದರರಿಗೆ ಸಮಪಾಲು ನೀಡಬೇಕು. ಈ ಸಮುದಾಯಗಳು ಹೊಟ್ಟೆಪಾಡಿಗಾಗಿ ಗುಳೆ ಹೋಗುವುದು, ಕಲ್ಲು ಒಡೆಯುವುದು, ಕಟ್ಟಿಗೆ ಮಾರಿ ತಮ್ಮ ತುತ್ತಿನ ಚೀಲವನ್ನು ತುಂಬಲು ಹೆಣಗಾಡುತ್ತಿದ್ದಾರೆ. ಆಯೋಗ ಒಂದೆಡೆ ಕುಳಿತು ವರದಿ ಸಿದ್ಧಪಡಿಸಿದರೆ ಜನರ ವಾಸ್ತವಿಕ ಸಮಸ್ಯೆ ತಿಳಿಯದು. ಆಯೋಗ ತಾಂಡಾಗಳಿಗೆ, ಗ್ರಾಮಗಳಿಗೆ ಬರಬೇಕು, ವರದಿ ಸಿದ್ಧಪಡಿಸಬೇಕು ಎಂದು ಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಅಖಿಲ ಕರ್ನಾಟಕ ಭೋವಿ ವಡ್ಡರ ವೇದಿಕೆ ರಾಜ್ಯಾಧ್ಯಕ್ಷ ವೈ. ಕೊಟ್ರೇಶ್ ಮಾತನಾಡಿ, ಪರಿಶಿಷ್ಟ ಜಾತಿಗೆ ಸೇರಿದ ಭೋವಿ, ಲಂಬಾಣಿ, ಕೊರಮ, ಕೊರಚ ಸಮುದಾಯದ ಪ್ರತಿನಿಧಿಗಳನ್ನು ಒಳಗೊಂಡಿರುವ ಮಹಾ ಒಕ್ಕೂಟವು ಪರಿಶಿಷ್ಟ ಜಾತಿಯ ಒಳಮೀಸಲಾತಿ ವರ್ಗೀಕಣ ಮಾಡಲು ಸುಪ್ರೀಂ ಕೋರ್ಟ್ ನೀಡಿರುವ ಆದೇಶವನ್ನು ನೆಪವಾಗಿರಿಸಿಕೊಂಡು ರಾಜ್ಯ ಸರ್ಕಾರ ಅವೈಜ್ಞಾನಿಕ, ಅಸಂವಿಧಾನಿಕವಾಗಿ, ಕಾನೂನು ಬಾಹಿರ ಮತ್ತು ದ್ವೇಷ-ಅಶಾಂತಿಗೆ ಕಾರಣವಾಗಿರುವ ಒಳಮೀಸಲಾತಿ ವಿಂಗಡನೆಗೆ ಮುಂದಾಗಿರುವುದನ್ನು ವಿರೋಧಿಸುತ್ತೇವೆ.

ನಮಗೆ ಮೀಸಲಾತಿ ಕೊಟ್ಟಿರುವದು ಡಾ. ಬಾಬಾ ಸಾಹೇಬ ಅಂಬೇಡ್ಕರ್‌ರವರ ಸಂವಿಧಾನವೇ ಹೊರತು ಯಾವುದೇ ಸಮುದಾಯಗಳಲ್ಲ, ಯಾವುದೇ ಸರ್ಕಾರವಲ್ಲ, ಮೀಸಲಾತಿಯಿಂದ ನಮ್ಮನ್ನು ತಗೆಯುವ ಹಕ್ಕು ಯಾರಿಗೂ ಇಲ್ಲ. ಸರ್ಕಾರ ತರಾತುರಿಯಲ್ಲಿ ಈ ನಿರ್ಧಾರ ತೆಗೆದುಕೊಂಡಿದೆ. ಈ ಸಮಾಜದ ಮೀಸಲಾತಿ ಸಂರಕ್ಷಣೆಗೆ ಸರ್ಕಾರ ಮುಂದಾಗಬೇಕು ಎಂದು ಆಗ್ರಹಿಸಿದರು.

ಸಮಾಜ ಕಲ್ಯಾಣ ಸಚಿವ ಎಚ್.ಸಿ. ಮಹಾದೇವಪ್ಪ ಮನವಿ ಸ್ವೀಕರಿಸಿ ಮಾತನಾಡಿ, ಪರಿಶಿಷ್ಟ ಜಾತಿಯಲ್ಲಿರುವ ಯಾವುದೇ ಸಮುದಾಯಕ್ಕೂ ಅನ್ಯಾಯ ಆಗುವದಿಲ್ಲ. ರಾಜ್ಯ ಸರ್ಕಾರ ನಿಮ್ಮ ಹಿತವನ್ನು ಕಾಯುತ್ತದೆ. ವೈಜ್ಞಾನಿಕವಾಗಿ, ವಾಸ್ತವಿಕ ದತ್ತಾಂಶಗಳನ್ನು ಸಂಗ್ರಹಿಸಿ ಒಳಮೀಸಲಾತಿ ಕುರಿತಾಗಿ ಮುಂದಿನ ತೀರ್ಮಾನವನ್ನು ಕೈಗೊಳ್ಳುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ಸಂಘಟನೆಗಳ ಪ್ರಮುಖರಾದ ಚಂದ್ರಕಾಂತ್ ಚವ್ಹಾಣ, ಮಂಜುನಾಥ ಹಿರೇಮನಿ, ಸುಶೀಲಮ್ಮ, ಪಾಂಡು ಚವ್ಹಾಣ, ಸುನೀಲ ದೋತ್ರೆ, ಮೋಹನರಾಜ ಭಜಂತ್ರಿ, ರಾಮಚಂದ್ರ, ಶ್ರೀಕಾಂತ ಭಜಂತ್ರಿ, ಸುನಂದಾ, ಸುಮಂಗಲಾ, ಡಿ.ಟಿ. ಏಕಾಂತ, ಬಸವರಾಜ್ ಬಂಡಿವಡ್ಡರ, ರಾಜು ವಡ್ಡರ, ಅವಿನಾಶ, ಸುರೇಶ ಗಿಡ್ಡಪ್ಪ, ಲಕ್ಷ್ಮೀ ಬಂಡಿವಡ್ಡರ, ತುಕಾರಾಮ ಭಜಂತ್ರಿ, ಪಿ.ವೆಂಕಟೇಶ, ಮಂಜುನಾಥ ಹಳ್ಳಾಳ, ಶ್ರೀನಿವಾಸ ಅವರೋಳ್ಳಿ, ಆನಂದ ಅಂಗಡಿ, ಹನುಮಾ ನಾಯಕ, ಕೃಷ್ಣಜಿ ಚವ್ಹಾಣ, ಐ.ಎಸ್. ಪೂಜಾರ, ಶಿವಣ್ಣ ಲಮಾಣಿ, ಮೋಹನ ಭಜಂತ್ರಿ, ದಯಾನಂದ ಪವಾರ, ಅಂಜಯನೇಪ್ಪ ಕಟಗಿ, ಸೋಮು ಲಮಾಣಿ, ಸುಭಾಷ ಗುಡಿಮನಿ, ಜಾನು ಲಮಾಣಿ, ಪರಮೇಶ ನಾಯಕ, ಪಾಂಡುರಂಗ ಪಮ್ಮಾರ, ಮಂಗಲೆಪ್ಪ ಲಮಾಣಿ, ವಾಸು ಲಮಾಣಿ, ಚಂದ್ರಾ ನಾಯಕ, ಕೆ.ಸಿ. ನಭಾಪುರ, ನೀಲು ರಾಠೋಡ, ಪುಂಡಲೀಕ ಲಮಾಣಿ, ಸುರೇಶ ಮಾಳಗಿಮನಿ, ಗಿರೀಶ, ಜಗದೀಶ, ಮಂಜುನಾಥ, ಶಿವಕುಮಾರ, ನಾಗರಾಜ, ಜ್ಯೋತಿ, ನಾಗಾಸರ, ತಿಪ್ಪೇಸ್ವಾಮಿ ಮುಂತಾದವರಿದ್ದರು.

ವಿಧಾನಸಭೆಯ ಉಪಸಭಾಪತಿಗಳಾದ ರುದ್ರಪ್ಪ ಲಮಾಣಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಶಾಸಕ ಡಾ. ಚಂದ್ರು ಲಮಾಣಿ, ಚಿಂಚೋಳಿಯ ಅವಿನಾಶ್ ಜಾಧವ್, ಹೂವಿನಹಡಗಲಿಯ ಕೃಷ್ಣ ನಾಯ್ಕ್, ಹಗರಿಬೊಮ್ಮನಹಳ್ಳಿಯ ನೇಮಿರಾಜ ನಾಯಕ, ಹೊಳಲ್ಕೆರೆಯ ಚಂದ್ರಪ್ಪ ಪ್ರತಿಭಟನೆಯಲ್ಲಿ ಭಾಗವಹಿಸಿ ಸರ್ಕಾರ ತರಾತುರಿಯಲ್ಲಿ ಒಳಮೀಸಲಾತಿ ವಿಚಾರವಾಗಿ ಯಾವುದೇ ದುಡುಕು ತೀರ್ಮಾನವನ್ನು ತೆಗೆದುಕೊಳ್ಳಬಾರದು ಎಂದರು.

# ತರಬೇತಿಗಾಗಿ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಆದೇಶದನ್ವಯ 2024-25ನೇ ಸಾಲಿನಲ್ಲಿ ಪ್ರವಾಸೋದ್ಯಮ/ಆತಿಥ್ಯ ಕ್ಷೇತ್ರದಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಪರಿಶಿಷ್ಟ ಜಾತಿಗೆ ಸೇರಿದ 292 ಅಭ್ಯರ್ಥಿಗಳಿಗೆ ಹಾಗೂ ಪರಿಶಿಷ್ಟ ಪಂಗಡಕ್ಕೆ ಸೇರಿದ 162 ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯ ಕ್ಷೇತ್ರದ ಸಂಸ್ಥೆಗಳಾದ ಫುಡ್ ಕ್ರಾಫ್ಟ್ ಇನ್ಸಿಟ್ಯೂಟ್, ಮೈಸೂರ್ ಹಾಗೂ ಇನ್ಸಿಟ್ಯೂಟ್ ಆಫ್ ಹೋಟೆಲ್ ಮ್ಯಾನೇಜಮೆಂಟ್ (ಐಎಚ್‌ಎಂ) ರವರ ಮೂಲಕ ವಸತಿ ಸಹಿತ ಕಾರ್ಯಕ್ರಮವನ್ನು ಜಾರಿಗೊಳಿಸಲು ಉದ್ದೇಶಿಸಲಾಗಿದೆ.

ಫುಡ್ ಮತ್ತು ಬೆವರೇಜ್ ಸರ್ವಿಸ್ ಸ್ಟೇವರ್ಡ್, ರೂಮ್ ಅಟೆಂಡೆಂಟ್, ಫ್ರಂಟ್ ಆಫೀಸ್ ಅಸೋಸಿಯೇಟ್, ಮಲ್ಟಿ ಕ್ಯೂಸಿನ್ ಕುಕ್ ಈ ವಿಷಯಗಳ ತರಬೇತಿ ಕಾರ್ಯಕ್ರಮಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಗಳನ್ನು ಪಡೆಯಲು ಇಚ್ಛಿಸುವವರು ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಗದಗ ಕಚೇರಿಯಲ್ಲಿ ಅರ್ಜಿಗಳನ್ನು ಪಡೆದು ಅರ್ಜಿಗಳನ್ನು ಡಿಸೆಂಬರ್ 28 ರೊಳಗೆ ಸಲ್ಲಿಸಬಹುದಾಗಿದೆ. ತರಬೇತಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಪ್ರವಾಸೋದ್ಯಮ ಇಲಾಖೆ, ಎ.ಸಿ. ಕಚೇರಿ ಕಟ್ಟಡ, ಗದಗ ಜಿಲ್ಲೆ,ಗದಗ ದೂರವಾಣಿ ಸಂಖ್ಯೆ 08372-233017 ಸಂಪರ್ಕಿಸಬಹುದಾಗಿದೆ.

# ಸಿ.ಟಿ ರವಿ ಬಂಧನ | ಯಾವ ಹೆಣ್ಣು ಮಕ್ಕಳೂ ಇಂತಹ ಆರೋಪಗಳ ಬಗ್ಗೆ ಸುಳ್ಳು ದೂರು ಕೊಡಲು ಸಾಧ್ಯವಿಲ್ಲ : ಸಿಎಂ ಸಿದ್ದರಾಮಯ್ಯ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



ಸಿ.ಟಿ ರವಿಯವರು ಕೀಳುಭಾಷೆ ಬಳಸಿದ್ದು ಸುಳ್ಳಾದರೆ, ಅವರ ಬಂಧನ ಏಕೆ ಆಯ್ತು? ಸಾಮಾನ್ಯವಾಗಿ ಇಂತಹ ಆರೋಪಗಳ ಬಗ್ಗೆ ಹೆಣ್ಣುಮಕ್ಕಳು ಸುಳ್ಳು ದೂರು ಕೊಡಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಮಂಡ್ಯದಲ್ಲಿ ಮಾತನಾಡಿದ ಅವರು, ಸಿ.ಟಿ ರವಿ ಬಂಧನ ವಿರೋಧಿಸಿ ಬಿಜೆಪಿ ಪಕ್ಷ ಪ್ರತಿಭಟನೆ ಮಾಡುವ ಮೂಲಕ ಹೆಣ್ಣುಮಕ್ಕಳಿಗೆ ಅವಹೇಳನ ಕಾರಿಯಾಗಿ ಮಾತನಾಡುವುದನ್ನು ಬೆಂಬಲಿಸುತ್ತಿದ್ದಾರೆ. ಸಿ.ಟಿ ರವಿಯವರು ಅವಾಚ್ಯ ಪದ ಏಕೆ ಬಳಸಿದರೆಂದು ನನಗೆ ತಿಳಿದಿಲ್ಲ. ಆದರೆ ಇದೊಂದು ಗಂಭೀರ ಸ್ವರೂಪದ ಅಪರಾಧ ಎಂದರು.

ಸಿ.ಟಿ ರವಿಯವರು ತಾವು 'ಪ್ರಸ್ಟೇಷನ್' ಪದ ಬಳಸಿರುವುದಾಗಿ ತಿಳಿಸಿದ್ದಾರೆ. ಆದರೆ, ಅವಾಚ್ಯ ಪದ ಬಳಸಿರುವುದು ನಿಜವೆಂದು ಸಚಿವರು ಹೇಳಿದ್ದಾರೆ. ಕೀಳು ಪದಬಳಕೆಯನ್ನು ಕೇಳಿರುವುದಾಗಿ ಅಲ್ಲಿಯೇ ಇದ್ದ ಇತರ ಸದಸ್ಯರೂ ಹೇಳಿದ್ದಾರೆ. ಸಭಾಪತಿಯವರು ಪೀಠದಿಂದ ಹೊರನಡೆದ ನಂತರ ನಡೆದಿರುವ ಘಟನೆ ಬಗ್ಗೆ ಆಡಿಯೋ ಮತ್ತು ವಿಡಿಯೋ ಇದೆ ಎಂದೂ ಹಲವರು ಹೇಳುತ್ತಿದ್ದು, ಪದಬಳಕೆಯಾಗಿರುವುದು ಸತ್ಯ ಎಂದು ಹೇಳಿದರು.

ಸಿ.ಟಿ ರವಿಯವರು ಎಸಗಿರುವ ಅಪರಾಧ ಕೃತ್ಯಕ್ಕೆ ಅನುಗುಣವಾಗಿ ಕಾನೂನಿನ ಕ್ರಮ ಜರುಗಿಸಬೇಕಾಗುತ್ತದೆ. ಬೆಳಗಾವಿಯಲ್ಲಿ ಜನರ ಆಕ್ರೋಶದಿಂದ ಸಿ.ಟಿ ರವಿಯವರನ್ನು ರಕ್ಷಿಸಲು ಖಾನಾಪುರಕ್ಕೆ ಅವರನ್ನು ಕರೆತರಲಾಗಿತ್ತು ಎಂದು ತಿಳಿಸಿದ್ದಾರೆ.

# ಸಂಸತ್‌ನ ಗೇಟ್‌ಗಳಲ್ಲಿ ಪ್ರತಿಭಟನೆ ನಿಷೇಧ : ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಆದೇಶ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**



ಸಂಸತ್ತಿನ ಗೇಟ್‌ಗಳ ಮುಂದೆ ಸಂಸದರು ಅಥವಾ ರಾಜಕೀಯ ಪಕ್ಷಗಳ ನಡೆಸುವ ಪ್ರತಿಭಟನಾ ಪ್ರದರ್ಶನವನ್ನು ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ಅವರು ಗುರುವಾರ ನಿಷೇಧಿಸಿದ್ದಾರೆ ಎಂದು ಮೂಲಗಳನ್ನು ಉಲ್ಲೇಖಿಸಿ ಪಿಟಿಐ ವರದಿ ಮಾಡಿದೆ. ಸಂಸತ್‌ನ ಗೇಟ್‌ಗಳಲ್ಲಿ

ಅವರ ಆದೇಶಕ್ಕೂ ಮೊದಲು ರಾಜ್ಯಸಭೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಬಿಆರ್ ಅಂಬೇಡ್ಕರ್ ಅವರನ್ನು ಅವಮಾನಿಸಿದ್ದಾರೆ ಎಂದು ಆರೋಪಿಸಿ ಕಾಂಗ್ರೆಸ್ ಪ್ರತಿಭಟಿಸಿತ್ತು. ಇದರ ವಿರುದ್ಧ ಬಿಜೆಪಿ ಕೂಡಾ ಪ್ರತಿಭಟನೆ ನಡೆಸಿದ್ದು, ಕಾಂಗ್ರೆಸ್ ಅಂಬೇಡ್ಕರ್ ಅವರನ್ನು ಅವಮಾನಿಸಿದೆ ಎಂದು ಆರೋಪಿಸಿತ್ತು.

ಈ ಪ್ರತಿಭಟನೆಯ ನಂತರ ಸಂಸತ್ ಕಟ್ಟಡದ ಅವರಣದೊಳಗೆ ಉಭಯ ಪಕ್ಷಗಳ ಸಂಸದರು ಪರಸ್ಪರ ದಾಳಿ ನಡೆದಿರುವ ಬಗ್ಗೆ ಆರೋಪಿಸಿದ್ದಾರೆ. ಬಿಜೆಪಿಯ ಇಬ್ಬರು ಸಂಸದರು ಈ ವೇಳೆ ಗಾಯಗೊಂಡಿದ್ದಾರೆ ಎಂದು ಹೇಳಲಾಗಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಇನ್ನೊಬ್ಬ ಬಿಜೆಪಿ ಸಂಸದರನ್ನು ತಳ್ಳಿದರು ಎಂದು ಆಡಳಿತ ಪಕ್ಷ ಆರೋಪಿಸಿದ್ದು, ಇದರ ನಂತರ ದೆಹಲಿ ಪೊಲೀಸರು ಅವರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ.

ಮತ್ತೊಂದೆಡೆ, ಬಿಜೆಪಿ ಸಂಸದರು ತಳ್ಳಿದ ಕಾರಣ ಪಕ್ಷದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೆಲದ ಮೇಲೆ ಬಿದ್ದಿದ್ದಾರೆ ಎಂದು ಕಾಂಗ್ರೆಸ್ ಆರೋಪಿಸಿದೆ. ಅದಾಗ್ಯೂ, ಬಿಜೆಪಿ ಸಂಸದರು ಖರ್ಗೆ ಮೇಲೆ ಹಲ್ಲೆ ನಡೆಸಿದ್ದಾರೆ ಎಂಬ ದೂರಿನ ಬಗ್ಗೆ ಪೊಲೀಸರು ಇನ್ನೂ ಕ್ರಮ ಕೈಗೊಂಡಿಲ್ಲ.

ಈ ಸಂಘರ್ಷದ ನಂತರ, ಸಂಸತ್ತಿನ ಪಾವಿತ್ರ್ಯತೆಯನ್ನು ಕಾಪಾಡಲು ಮತ್ತು ಅದರ ಕಲಾಪಗಳಿಗೆ ಅಡ್ಡಿಯಾಗದಂತೆ ನೋಡಿಕೊಳ್ಳಲು ಪ್ರತಿಭಟನಾ ಪ್ರದರ್ಶನಗಳನ್ನು ನಿಷೇಧಿಸುವ ನಿರ್ದೇಶನವನ್ನು ನೀಡಲಾಗಿದೆ ಎಂದು ಸ್ಪೀಕರ್ ಕಚೇರಿ ಒತ್ತಿಹೇಳಿದೆ ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

## ಹುಲಕೋಟಿಯ ಐ.ಸಿ.ಎ.ಆರ್-ಕೆ.ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದಿಂದ ಆಯೋಜನೆ

# ಬ್ಯಾಡಗಿ ಮೆಣಸಿನಕಾಯಿ ಬೆಳೆಯ ಕ್ಷೇತ್ರೋತ್ಸವ

**■ವಿಜಯಸಾಕ್ಷಿ ಸುದ್ದಿ, ಗದಗ**

ಹುಲಕೋಟಿಯ ಐ.ಸಿ.ಎ.ಆರ್-ಕೆ. ಎಚ್.ಪಾಟೀಲ ಕೃಷಿ ವಿಜ್ಞಾನ ಕೇಂದ್ರದ ದತ್ತು ಗ್ರಾಮವಾದ ರೋಣ ತಾಲೂಕಿನ ಮಾಡಲಗೇರಿ ಗ್ರಾಮದ ಭರಮಗೌಡ ರಾಯನಗೌಡ್ರ ಇವರ ಹೊಲದಲ್ಲಿ ಬ್ಯಾಡಗಿ ಮೆಣಸಿನಕಾಯಿ ಬೆಳೆಯ ಕ್ಷೇತ್ರೋತ್ಸವವನ್ನು ಏರ್ಪಡಿಸಲಾಗಿತ್ತು.



ಕಾರ್ಯಕ್ರಮದಲ್ಲಿ ಕೃಷಿ ವಿಜ್ಞಾನ ಕೇಂದ್ರದ ಕೃಷಿ ಇಂಜಿನಿಯರಿಂಗ್ ವಿಜ್ಞಾನಿಗಳಾದ ಡಾ. ವಿನಾಯಕ ನಿರಂಜನ್ ಮಾತನಾಡಿ, ಕೇಂದ್ರದ ದತ್ತು ಗ್ರಾಮಗಳಾದ ಮುಂಡರಗಿ ತಾಲೂಕಿನ ಹಳ್ಳಿಗುಡಿ, ರೋಣ ತಾಲೂಕಿನ ಮಾಡಲಗೇರಿ ಹಾಗೂ ಗದಗ ತಾಲೂಕಿನ ಅಸುಂಡಿಯಲ್ಲಿ ಬ್ಯಾಡಗಿ ಮೆಣಸಿನಕಾಯಿ ಬೆಳೆಯಲ್ಲಿ ಅಧಿಕ ಇಳುವರಿ ಕೊಡುವ ಹಾಗೂ ರೋಗಗಳನ್ನು ತಡೆದುಕೊಳ್ಳುವ ರುದ್ರಾ ತಳಿಯ ಪ್ರಾತ್ಯಕ್ಷಿಕೆ ಕೈಗೊಂಡ ತಾಕುಗಳಲ್ಲಿ ಸಮಗ್ರ ಬೆಳೆ ನಿರ್ವಹಣೆಯೊಂದಿಗೆ ಅಳವಡಿಸಲಾಗಿದೆ ಎಂದು ತಿಳಿಸಿದರು.

ಕೆವಿಕೆ ತೋಟಗಾರಿಕೆ ತಜ್ಞರಾದ ಹೇಮಾವತಿ ಹಿರೇಗೌಡರ ಮಾತನಾಡಿ, ರುದ್ರಾ ತಳಿಯು ತೋಟಗಾರಿಕೆ ವಿಶ್ವವಿದ್ಯಾಲಯ ಬಾಗಲಕೋಟೆಯಿಂದ ಬಿಡುಗಡೆಯಾಗಿದ್ದು, ಬ್ಯಾಡಗಿ ಡಬ್ಬಿಯನ್ನು ಹೋಲುತ್ತದೆ. ಕಾಯಿಗಳು ಒಣಗಿದಾಗ ಕಡು ಕೆಂಪು ಬಣ್ಣಕ್ಕೆ ತಿರುಗುತ್ತದೆ ಮತ್ತು ಉತ್ತಮ ಬೆಳೆ ಸಾಮರ್ಥ್ಯ ಹೊಂದಿದೆ. ಪ್ರಾತ್ಯಕ್ಷಿಕೆ ತಾಕುಗಳಲ್ಲಿ ಬೀಜಗಳನ್ನು ಬಿತ್ತುವ ಮುನ್ನ ಪ್ರತಿ ಒಂದು ಕಿಲೋ ಬೀಜಕ್ಕೆ 10 ಗ್ರಾಂ ಇಮಿಡಾಕ್ಲೋಪ್ರಿಡ್ 70 ಡಬ್ಲ್ಯೂ. ಎಸ್. ಕೀಟನಾಶಕದ ಜೊತೆಗೆ 4 ಗ್ರಾಂ ಟ್ರೈಕೋಡರ್ಮ ವಿರಿಡೆ ಜೈವಿಕ ಶಿಲಿಂದ್ರನಾಶಕದಿಂದ ಬೀಜೋಪಚಾರ ಮಾಡಿ ಬಿತ್ತಲಾಗಿದೆ ಎಂದರು.

ರಸ ಹೀರುವ ಕೀಟಗಳನ್ನು ನಿರ್ವಹಣೆ ಮಾಡಲು ಹಳದಿ ಹಾಗೂ ನೀಲಿ ಅಂಟು ಬಲೆಗಳನ್ನು ಹಾಕುವುದರ ಜೊತೆಗೆ ಜೈವಿಕ ಕೀಟನಾಶಕಗಳಾದ ಲೇಖಾನಿಸಿಲಿಯಮ್ ಲೇಖಾನಿ ಹಾಗೂ ಬೆವೆರಿಯಾ ಬಾಸಿಯಾನಾವನ್ನು ಪ್ರತಿ ಲೀಟರ ನೀರಿಗೆ ತಲಾ 5 ಗ್ರಾಂನಂತೆ ಬೆರಸಿ ಸಿಂಪಡಿಸಲಾಗಿದೆ. ಇದರಿಂದ ಥ್ರಿಪ್ಸ್ ನುಶಿ ಹಾಗೂ ಜೇಡರ ನುಶಿಗಳ ಬಾಧೆ ಕಡಿಮೆಯಾಗಿದೆ. ಗೋವಿನ ಜೋಳವನ್ನು ಬದು ಬೆಳೆಯಾಗಿ ಹಾಗೂ ಪ್ರತಿ 16 ಮೆಣಸಿನ ಸಾಲುಗಳಿಗೆ ಒಂದು ಸಾಲು ಚಂಡು ಹೂವಿನ ಸಸಿಗಳನ್ನು ಬಲೆ ಬೆಳೆಯಾಗಿ ಬೆಳೆಸಲಾಗಿದೆ. ಇದರಿಂದ ಮುಟುರು ರೋಗ ಹಾಗೂ ಕೀಟಗಳ ಬಾಧೆ ಗಣನೀಯವಾಗಿ ಕಡಿಮೆಯಾಗಿದೆ ಎಂದು ಹೇಮಾವತಿ ಹಿರೇಗೌಡರ ತಿಳಿಸಿದರು.

ಭರಮಗೌಡ ರಾಯನಗೌಡ್ರ ಇವರು ತಮ್ಮ ಹೊಲದಲ್ಲಿ ಕೈಗೊಂಡ ಪ್ರಾತ್ಯಕ್ಷಿಕೆಯಲ್ಲಿ ಅಳವಡಿಸಿದ ವಿವಿಧ ತಂತ್ರಜಾನಗಳ ಕುರಿತು ವಿವರಿಸಿ, ತಮ್ಮ ಅನುಭವವನ್ನು ಹಂಚಿಕೊಂಡರು. ಕ್ಷೇತ್ರೋತ್ಸವದಲ್ಲಿ ಗ್ರಾಮದ ಯುವಕರು ಮತ್ತು ಪ್ರಗತಿಪರ ರೈತರು ಉಪಸ್ಥಿತರಿದ್ದರು.

# ದರಪಟ್ಟಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯತ್ ಅನಿಬರ್ಂಧಿತ ಅನುದಾನದಡಿಯಲ್ಲಿ ವಸತಿ ನಿಲಯಗಳಿಗೆ ವಾಷಿಂಗ್ ಮಿಷನ್ ಸಾಮಗ್ರಿಗಳನ್ನು ಖರೀದಿಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಪೂರೈಕೆದಾರರು ಡಿಸೆಂಬರ್ 24 ರ ಮಧ್ಯಾಹ್ನ 3 ಗಂಟೆಯೊಳಗೆ (ರಜೆ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳ ಮೊಬೈಲ್ ಸಂಖ್ಯೆ 9480865004 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯುಪಿಎಸ್ ಖರೀದಿಸಲು ದರಪಟ್ಟಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯತ್ ಅನಿಬರ್ಂಧಿತ ಅನುದಾನದಡಿಯಲ್ಲಿ ವಸತಿ ನಿಲಯಗಳಿಗೆ ಯು.ಪಿ.ಎಸ್. ಖರೀದಿಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಪೂರೈಕೆದಾರರು ಡಿಸೆಂಬರ್ 24 ರ ಮಧ್ಯಾಹ್ನ 3 ಗಂಟೆಯೊಳಗೆ (ರಜೆ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾದಿಕಾರಿಗಳ ಮೊಬೈಲ್ ಸಂಖ್ಯೆ 9480865004 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಹಾರ ಸೇವಿಸುವ ಪಾತ್ರೆಗಳನ್ನು ಖರೀದಿಸಲು ದರಪಟ್ಟಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯತ್ ಅನಿರ್ಭಂಧಿತ ಅನುದಾನದಡಿಯಲ್ಲಿ ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಆಹಾರ ಸೇವಿಸುವ ಪಾತ್ರೆಗಳು ( ಲೋಟ, ತಟ್ಟೆ, ಚಮಚ, ಬಟ್ಟಲುಗಳು ಹಾಗೂ ಇತರೆ ಪರಿಕರಗಳನ್ನು) ಸಾಮಗ್ರಿಗಳನ್ನು ಖರೀದಿಸಲು ಅರ್ಹ ಸರಬರಾಜುದಾರರಿಂದ ದರಪಟ್ಟಿಯನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಪೂರೈಕೆದಾರರು ಡಿಸೆಂಬರ್ 24ರ ಮಧ್ಯಾಹ್ನ 3 ಗಂಟೆಯೊಳಗೆ (ರಜೆ ದಿನಗಳನ್ನು ಹೊರತುಪಡಿಸಿ) ದರಪಟ್ಟಿಯನ್ನು ಸಲ್ಲಿಸತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾದಿಕಾರಿಗಳ ಮೊಬೈಲ್ ಸಂಖ್ಯೆ 9480865004 ನ್ನು ಸಂಪರ್ಕಿಸಬಹುದಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಬರುವ 40 ಹಣಕಾಸು /ಗಿರವಿದಾರರು/ ಲೇವಾದೇವಿಗಾರರ ಸಂಸ್ಥೆಗಳನ್ನು ಹಲವಾರು ವರ್ಷಗಳಿಂದ ನವೀಕರಣಗೊಳಿಸದೇ ಇರುವುದರಿಂದ ಲೈಸನ್ಸ್ ಗಳನ್ನು ರದ್ದುಪಡಿಸಿ ಭದ್ರತಾ ಠೇವಣಿಯನ್ನು ಸರಕಾರಕ್ಕೆ ಮುಟ್ಟುಗೋಲು ಹಾಕಲಾಗಿದೆ. 40 ಹಣಕಾಸು/ಗಿರವಿದಾರರು/ ಲೇವಾದೇವಿಗಾರರ ಸಂಸ್ಥೆಗಳ ಯಾದಿಯನ್ನು ಸಹಕಾರ ಸಂಘಗಳ ಉಪನಿಬಂಧಕರು, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ-125, ಗದಗ ಜಿಲ್ಲೆ, ಗದಗ ಇವರ ಕಚೇರಿಯಲ್ಲಿ ಈಗಾಗಲೇ ನೋಟಿಸ್ ಬೋರ್ಡಿನಲ್ಲಿ ಪ್ರಕಟಿಸಲಾಗಿದೆ. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಉಪನಿಬಂಧಕರು, ಗದಗ ಜಿಲ್ಲೆ, ಗದಗ ಈ ಕಚೇರಿಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಶಾಸಕರು, ಸಚಿವರ ಸಭೆ ಕರೆದಿದ್ದು ಸ್ವಾಗತರ್ಹ

■ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ಅಧ್ಯಕ್ಷರಾದ ವಿಜಯಾನಂದ ಕಾಶಪ್ಪನವರ ಸಮಾಜದ ಹೋರಾಟದ ಹಿತದೃಷ್ಟಿಯಿಂದ ಮುಖ್ಯಮಂತ್ರಿಗಳ ಮನವೊಲಿಸಿ ಸಮಾಜದಲ್ಲಿ ಆರ್ಥಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದ ಬಹುಸಂಖ್ಯಾತ ಪಂಚಮಸಾಲಿಯವರನ್ನು ಕಾನೂನುಬದ್ಧವಾಗಿ ಮೀಸಲಾತಿ ಕೊಡಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳ ಗೃಹ ಕಛೇರಿ ಕೃಷ್ಣಾದಲ್ಲಿ ಡಿ. 21ರಂದು ಸಭೆ ಕರೆದಿರುವುದು ಸ್ವಾಗತಾರ್ಹ ಎಂದು ಪಂಚಮಸಾಲಿ ಕ್ಷೇಮಾಭಿವೃದ್ಧಿ ಸಂಘದ ಬೆಟಗೇರಿ-ಗದಗ ಕಾರ್ಯದರ್ಶಿ ಬಸವರಾಜ ಕುಂದಗೋಳ ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿ, ಇದಕ್ಕೆ ಕಾರಣೀಭೂತರಾದ ವಿಜಯಾನಂದ ಕಾಶಪ್ಪನವರರಿಗೆ ಸಮಾಜದ ವತಿಯಿಂದ ಧನ್ಯವಾದ ಅರ್ಪಿಸಿ, ಸರ್ವಪಕ್ಷ ಸಮಾಜದ ಶಾಸಕರು, ಪದಾಧಿಕಾರಿಗಳು ಹಾಗೂ ಸಮಾಜದ ಗುರುಗಳು ಸೇರಿ ಸಮಾಜದ ಬಗ್ಗೆ ಚಿಂತನೆ ಮಾಡಿದಾಗ ಸಮಾಜದ ಅಭಿವೃದ್ಧಿಗೆ ಪೂರಕವಾಗಲಿದೆ ಎಂದಿದ್ದಾರೆ.

# ಆಕ್ಷೇಪಣೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣದ ವಾರ್ಡ್ ನಂ. 01 ರ ಅಶ್ವಿನಿ ನಗರದಲ್ಲಿ ಬರುವ ರಿ.ಸ ನಂ. 653/3ಸಿ ಟಿ.ಪಿ.ಸಿ. ನಂ.653/3ಸಿ/1 ರ ಪಟ್ಟಣ ಪಂಚಾಯತ್ ಮಾಲೀಕತ್ವದ ನಾಗರಿಕ ಸೌಲಭ್ಯ ಉದ್ದೇಶಕ್ಕಾಗಿ ಮೀಸಲಿರುವ ಖಾಲಿ ನಿವೇಶನವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರ ಹೆಸರಿಗೆ 30 ವರ್ಷಗಳ ಅವಧಿಗೆ ಲೀಜ್ ನೀಡಲು ಸಾಮಾನ್ಯ ಸಭೆಯಲ್ಲಿ ನಿರ್ಣಯಿಸಲಾಗಿದೆ.

ಲೀಜ್ ನೀಡಲು ಯಾವುದಾದರೂ ತಂಟೆ- ತಕರಾರು ಇದ್ದಲ್ಲಿ ಪ್ರಕಟಣೆಯಾದ 15 ದಿನದೊಳಗೆ ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

### ಐಸ್ಕ್ರೀಮ್ ವ್ಯಾಪಾರಸ್ಥರ ವಿವಿಧೋದ್ದೇಶಗಳ ಸಂಘ ಉದ್ಘಾಟಿಸಿದ ಮಹೇಶ್ವರ ಸ್ವಾಮೀಜಿ

# ಒಗ್ಗಟ್ಟಿನಿಂದ ಸಂಘಟನೆ ಬಲಗೊಳ್ಳುತ್ತದೆ

■ವಿಜಯಸಾಕ್ಷಿ ಸುದ್ದಿ, ಗದಗ

ಒಗ್ಗಟ್ಟಿನಿಂದ ಸಂಘಟನೆ ಬಲಗೊಳ್ಳುತ್ತದೆ. ಒಮ್ಮತದ ಅಭಿಪ್ರಾಯ, ದಿಟ್ಟವಾದ ನಿರ್ಧಾರಗಳಿಂದ ಕೆಲಸ ಕಾರ್ಯಗಳು ಬೇಡಿಕೆಗಳು ಸಾಕಾರಗೊಳ್ಳಬಲ್ಲವು ಎಂದು ಗದುಗಿನ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿ ಮಹೇಶ್ವರ ಸ್ವಾಮೀಜಿ ಹೊಸಳ್ಳಿಮಠ ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ಗದುಗಿನ ಶಾಂತಾರಾಮ ಸಮುದಾಯ ಭವನದಲ್ಲಿ ಗದಗ ಜಿಲ್ಲಾ ತಂಪು ಪಾನೀಯಗಳ, ಜ್ಯೂಸ್ ತಯಾರಕರ ಹಾಗೂ ಐಸ್ಕ್ರೀಮ್ ವ್ಯಾಪಾರಸ್ಥರ ವಿವಿಧೋದ್ದೇಶಗಳ ಸಂಘವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ, ಸಾನ್ನಿಧ್ಯ ವಹಿಸಿ ಮಾತನಾಡಿದರು.

ಗದಗ ಪರಿಸರದಲ್ಲಿ ತಂಪು ಪಾನೀಯಗಳ ಜ್ಯೂಸ್ ತಯಾರಕರ ಹಾಗೂ ಐಸ್ಕ್ರೀಮ್ ವ್ಯಾಪಾರಸ್ಥರ ವೃತ್ತಿಯಲ್ಲಿ ಹೊಸತನವನ್ನು ತರುವ ಮೂಲಕ ಗ್ರಾಹಕರಿಗೆ ಉತ್ತಮ ಸೇವೆ ಒದಗಿಸುತ್ತಿದ್ದು, ಇದೀಗ ಈ ಎಲ್ಲ ವ್ಯಾಪಾರಸ್ಥರು ಸಂಘಟಿತರಾಗಿದ್ದು ಅಭಿನಂದನೀಯ. ಸಂಘಟನೆ ಬೆಳೆಯಲಿ, ಸರಕಾರದಿಂದ ಲಭ್ಯವಿರುವ ಸೌಲಭ್ಯಗಳನ್ನು ಪಡೆಯಲಿ ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್‌ನ ವ್ಹಿ.ಎಸ್. ಮಾಟಲದಿನ್ನಿ, ಶಿವಯ್ಯ ನಾಲತ್ವಾಡಮಠ ಮಾತನಾಡಿ, ಈ ಸಂಘಟನೆಗೆ ಚೇಂಬರ್



ಸಹಕಾರ ನೀಡುವ ಮೂಲಕ ಸೂಕ್ತ ಮಾರ್ಗದರ್ಶನ ನೀಡಲಿದ್ದು, ಸಂಘಟನೆ ಬಲವರ್ಧನೆಗೊಳ್ಳಲಿ, ಗ್ರಾಹಕರಿಗೆ ಉತ್ತಮ ಸೇವೆ ಒದಗಿಸಿ ಎಂದರು.

ಇನ್ನೋರ್ವ ಮುಖ್ಯ ಅತಿಥಿ ಗದಗ ಜಿಲ್ಲಾ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಯ ಡಾ. ರಾಜೇಂದ್ರ ಗಡಾದ ಮಾತನಾಡಿ, ತಂಪು ಪಾನೀಯಗಳ ಜ್ಯೂಸ್ ತಯಾರಕರು ಹಾಗೂ ಐಸ್ಕ್ರೀಮ್ ವ್ಯಾಪಾರಸ್ಥರು ಗ್ರಾಹಕರ ಹಿತಾಸಕ್ತಿಯನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಯ ಮಾರ್ಗಸೂಚಿಗಳನ್ನು ಅನುಸರಿಸಬೇಕು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಗಣೇಶ ಹಬೀಬ, ತಂಪು ಪಾನೀಯಗಳ ಜ್ಯೂಸ್ ತಯಾರಕರ ಹಾಗೂ ಐಸ್ಕ್ರೀಮ್ ವ್ಯಾಪಾರಸ್ಥರನ್ನು ಸಂಘಟಿಸುವ ಮೂಲಕ ಗ್ರಾಹಕರಿಗೆ ಇನ್ನೂ ಉತ್ತಮ ಸೇವೆ ಒದಗಿಸಲು ಅವಕಾಶಗಳೇನು, ಸರಕಾರದಿಂದ ಸಿಗಬಹುದಾದ ಸೌಲಭ್ಯಗಳೇನು, ನಾವು ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳೇನು ಎಂದು ಚಿಂತನ-ಮಂಥನಕ್ಕೆ ಈ ಸಂಘಟನೆ ಒಂದು ವೇದಿಕೆಯಾಗಿದೆ ಎಂದರು.

ವೇದಿಕೆಯ ಮೇಲೆ ಗದಗ ಎಸ್.ಎಸ್.ಕೆ ಪಂಚ ಕಮಿಟಿಯ ಅಧ್ಯಕ್ಷ ಫಕ್ಕೀರಸಾ ಭಾಂಡಗೆ ಹಾಗೂ ಸಂಘದ ಪ್ರಧಾನ ಕಾರ್ಯದರ್ಶಿ ಶಂಕರಸಾ ಪವಾರ ಉಪಸ್ಥಿತರಿದ್ದರು. ದತ್ತು ಬೇವಿನಕಟ್ಟಿ ಹಾಗೂ ರಾಧಾ ಮಾತನಾಡಿದರು. ಸಂಜೀವ ಹಬೀಬ ಪ್ರಾರ್ಥಿಸಿ ನಿರೂಪಿಸಿದರು. ಖಜಾಂಚಿ ಲುಕ್ಕಣಸಾ ರಾಜೋಳಿ ಸ್ವಾಗತಿಸಿ ಪರಿಚಯಿಸಿದರು, ನಂದು ಬೇವಿನಕಟ್ಟಿ ವಂದಿಸಿದರು.

ಸಮಾರಂಭದಲ್ಲಿ ಯಲ್ಲೋಸಾ ಹಬೀಬ, ಮೋತಿಲಾಲ ಕಬಾಡಿ, ರವೀಂದ್ರಸಾ ಪವಾರ, ಮಂಜುನಾಥ ಕಂದೋಳ್ಳಿ, ಈಶ್ವರಪ್ಪ ಪರಕಾಳಿ, ಸತೀಶ ದೇವಳೆ, ಕೃಷ್ಣಾ ಹಬೀಬ ಸೇರಿದಂತೆ ಗಣ್ಯವ್ಯಾಪಾರಸ್ಥರು ಪಾಲ್ಗೊಂಡಿದ್ದರು.

> ಪಾನೀಯ, ಜ್ಯೂಸ್, ಐಸ್ಕ್ರೀಮ್ ತಯಾರಿಕೆಯಲ್ಲಿ ಗ್ರಾಹಕರ ಆರೋಗ್ಯದ ಮೇಲೆ ಪರಿಣಾಮ ಬೀರುವ ರಾಸಾಯನಿಕವನ್ನು ಬಳಕೆ ಮಾಡಿದಲ್ಲಿ ಇಲಾಖೆಯು ಅಂತಹ ವ್ಯಾಪಾರಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ಅವಕಾಶವಿದೆ. ಕಾರಣ ವ್ಯಾಪಾರಸ್ಥರು ಗ್ರಾಹಕರ ಹಿತಾಸಕ್ತಿಯನ್ನು ಕಾಯ್ದುಕೊಳ್ಳಬೇಕೆಂದು ಜಿಲ್ಲಾ ಆಹಾರ ಸುರಕ್ಷತೆ ಹಾಗೂ ಗುಣಮಟ್ಟ ಇಲಾಖೆಯ ಡಾ. ರಾಜೇಂದ್ರ ಗಡಾದ ತಿಳಿಸಿದರು.

### ಸ್ಕೌಟ್ಸ್-ಗೈಡ್ಸ್ ವತಿಯಿಂದ ಜ. 6ರಿಂದ ನಾಲ್ಕು ದಿನ ಧಾರವಾಡದಲ್ಲಿ ಕಾರ್ಯಕ್ರಮ

# ಪ್ರಥಮ ಕಿತ್ತೂರು ಕರ್ನಾಟಕ ಜಾಂಬೋರೇಟ್

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ಧಾರವಾಡ ಜಿಲ್ಲಾ ಘಟಕದಿಂದ ತಾಲೂಕಿನ ದಡ್ಡಿ ಕಮಲಾಪೂರದಲ್ಲಿ ಪ್ರಥಮ ಕಿತ್ತೂರು ಕರ್ನಾಟಕ ಜಾಂಬೋರೇಟ್ ಮಕ್ಕಳ ಸಮಾವೇಶವನ್ನು 2025ರ ಜನೆವರಿ 6ರಿಂದ ಜನೆವರಿ 10ರವರೆಗೆ ಆಯೋಜಿಸಲಾಗಿದೆ ಎಂದು ಸ್ಕೌಟ್ಸ್ ಮತ್ತು ಗೈಡ್ಸ್‌ನ ಜಿಲ್ಲಾ ಮುಖ್ಯ ಆಯುಕ್ತ ಶ್ರೀಶೈಲ ಕರಿಕಟ್ಟಿ ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಧಾರವಾಡ ಕೋರ್ಟ್ ವೃತ್ತದ ಬಳಿಯ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಪ್ರಥಮ ಕಿತ್ತೂರು ಕರ್ನಾಟಕ ಜಾಂಬೋರೇಟ್ ಮಕ್ಕಳ ಸಮಾವೇಶದಲ್ಲಿ ಬೆಳಗಾವಿ ವಿಭಾಗದ 8 ಶೈಕ್ಷಣಿಕ ಜಿಲ್ಲೆಗಳಾದ ಕಾರವಾರ, ಶಿರಸಿ, ಬೆಳಗಾವಿ, ಧಾರವಾಡ, ಗದಗ, ಹಾವೇರಿ, ಬಾಗಲಕೋಟ, ವಿಜಯಪುರ ಜಿಲ್ಲೆಗಳಿಂದ 800 ಜನ ಹಿರಿಯ ಪ್ರಾಥಮಿಕ



ಮತ್ತು ಪ್ರೌಢಶಾಲೆಗಳ ಸ್ಕೌಟ್ಸ್ ಮತ್ತು ಗೈಡ್ಸ್ ಮಕ್ಕಳು ಭಾಗವಹಿಸಲಿದ್ದಾರೆ. ಕಾಲೇಜುಗಳ 120 ರೋವರ್ಸ್ ಮತ್ತು ರೇಂಜರ್ಸ್ ಮಕ್ಕಳು 80 ಜನ ಸ್ಕೌಟ್ಸ್ ಮತ್ತು ಗೈಡ್ಸ್ ಶಿಕ್ಷಕರು ಹಾಗೂ ಕಾರ್ಯಕ್ರಮದ ಆಯೋಜನೆ ಮತ್ತು ಉಸ್ತುವಾರಿಗಾಗಿ 200 ಜನ ಸಿಬ್ಬಂದಿಗಳು ಸೇರಿ ಒಟ್ಟು 1,200 ಜನರು ಭಾಗವಹಿಸಲಿದ್ದಾರೆ ಎಂದರು.

ಕಾರ್ಮಿಕ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಕಾರ್ಯಕ್ರಮ ಉದ್ಘಾಟಿಸುವರು. ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್ ಸಿಂಧ್ಯಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಜಿಲ್ಲೆಯ ಎಲ್ಲ ಜನಪ್ರತಿನಿಧಿಗಳು ಹಿರಿಯ ಅಧಿಕಾರಿಗಳು ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್‌ನ ಆಯಾ ಜಿಲ್ಲೆಗಳ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಮಕ್ಕಳ ಪ್ರದರ್ಶನ, ಶೈಕ್ಷಣಿಕ ಉಪನ್ಯಾಸಗಳು, ರಸಪ್ರಶ್ನೆ ಕಾರ್ಯಕ್ರಮ, ಯೋಗಯಾಮ, ಸ್ವಚ್ಛತಾ ಕಾರ್ಯ ಚಟುವಟಿಕೆ, ಶಿಬಿರವಾಸದ ಕಲ್ಪನೆ, ಜಿಲ್ಲೆಯ ಪ್ರೇಕ್ಷಣೀಯ ಸ್ಥಳಗಳ ವೀಕ್ಷಣೆ, ಶೈಕ್ಷಣಿಕ ಜಾಗೃತಿ ಮೂಡಿಸುವ ಮೌಲ್ಯಾಧಾರಿತ, ಶಿಕ್ಷಕರೇ ನಿರ್ಮಿಸಿದ ಕಿರುಚಿತ್ರಗಳ ಪ್ರದರ್ಶನ, ಜಾನಪದ, ಸಂಗೀತ ಕಾರ್ಯಕ್ರಮ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಮಕ್ಕಳಲ್ಲಿ ನಮ್ಮ ಕಲೆ-ಸಂಸ್ಕೃತಿಯ ಬಗ್ಗೆ ಅರಿವು ಮತ್ತು ಗೌರವ, ಶಿಸ್ತು, ಸಂಯಮ, ಮಾನವೀಯ ಮೌಲ್ಯಗಳು ಮುಂತಾದ ಸಕಾರಾತ್ಮಕ ಗುಣಗಳನ್ನು ರೂಢಿಸುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ ಎಂದು ಶ್ರೀಶೈಲ ಕರಿಕಟ್ಟಿ ತಿಳಿಸಿದರು.

ಸಭೆಯಲ್ಲಿ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಉಪಾಧ್ಯಕ್ಷ ವಿ.ವಿ. ಕಟ್ಟಿ, ಕೋಶಾಧಿಕಾರಿ ಬಸವರಾಜ ಕಡಕೋಳ, ಸ್ಕೌಟ್ಸ್ ಆಯುಕ್ತ ಎಸ್.ಐ. ನೇಕಾರ, ಸ್ಥಾನಿಕ ಆಯುಕ್ತರಾದ ಎಸ್.ವಿ. ಮೊರಬ, ಜಿಲ್ಲಾ ಸಹಾಯಕ ಆಯುಕ್ತ ಮಂಜುನಾಥ ಅಡಿವೇರ, ಸಿ.ಸಿ. ಅಳಗೋಡಿ ಮತ್ತು ಸ್ಕೌಟ್ಸ್ ಮತ್ತು ಗೈಡ್ಸ್‌ನ ಶಿಕ್ಷಕರು ಉಪಸ್ಥಿತರಿದ್ದರು.

> ಕಾರ್ಯಕ್ರಮದಲ್ಲಿ ಜಿಲ್ಲಾವಾರು ಪ್ರತಿಯೊಂದು ಜಿಲ್ಲೆಯನ್ನು ಪ್ರತಿನಿಧಿಸುವ ಮಕ್ಕಳಿಂದ ಸಾಹಸಮಯ ಚಟುವಟಿಕೆಗಳಾದ ಹಗ್ಗ ಏರುವುದು, ಸಮತೋಲನ ನಡೆಗೆ, ಕಮಾಂಡ್ ಗೋಡೆ, ಸಮತೋಲನ ಬ್ರಿಡ್ಜ್, ಹ್ಯಾಂಗಿಂಗ ಬ್ರಿಡ್ಜ್, ಟಾಯರ್ ಪಾಸಿಂಗ್, ವಾಚಿಂಗ್ ಟಾವರ್ ಮುಂತಾದ ಚಟುವಟಿಕೆಗಳು, ಕಲಾಪ್ರಕಾರಗಳು, ತಿಂಡಿ-ತಿನಿಸುಗಳು ಹಾಗೂ ಉಡುಗೆ ತೊಡುಗೆಗಳು ಪ್ರದರ್ಶನಗೊಳ್ಳಲಿವೆ ಎಂದು ಶ್ರೀಶೈಲ ಕರಿಕಟ್ಟಿ ತಿಳಿಸಿದರು.

# ಕೇಂದ್ರ ಗೃಹ ಸಚಿವರು ರಾಜೀನಾಮೆ ನೀಡಲಿ




■ವಿಜಯಸಾಕ್ಷಿ ಸುದ್ದಿ, ಬೀದರ

ಸಂವಿಧಾನದ ಕರ್ತೃ ಬಾಬಾ ಸಾಹೇಬ್ ಅಂಬೇಡ್ಕರ್‌ರನ್ನು ನಿಂದಿಸುವ ಮೂಲಕ ಗೃಹ ಮಂತ್ರಿ ಅಮಿತ್ ಶಾ ತಮ್ಮ ಫ್ಯಾಸಿಟ್ಸ್ ಮನಸ್ಥಿತಿಯನ್ನು ಬಹಿರಂಗಪಡಿಸಿದ್ದಾರೆಂದು ವೆಲ್ಫೇರ್ ಪಾರ್ಟಿ ಕರ್ನಾಟಕ ರಾಜ್ಯಾಧ್ಯಕ್ಷ ಅಡ್ವೋಕೇಟ್ ತಾಹೇರ್ ಹುಸೇನ್ ಆಕ್ರೋಶ ವ್ಯಕ್ತಪಡಿಸಿದರು.

ಅವರು ಬೀದರ ನಗರದಲ್ಲಿ ಅಮಿತ ಶಾ ವಿರುದ್ಧ ನಡೆದ ಪ್ರತಿಭಟನೆಯಲ್ಲಿ ಮಾತನಾಡುತ್ತ, ಗೃಹ ಮಂತ್ರಿಗಳ ಈ ಹೇಳಿಕೆ ಖಂಡನೀಯ. ಬಾಬಾ ಸಾಹೇಬ್ ಅಂಬೇಡ್ಕರ್ ಹೆಸರು ಹೇಳುವುದು ಭಾರತೀಯರೆಲ್ಲರಿಗೆ ಹೆಮ್ಮೆಯ ವಿಚಾರವಾಗಿದೆ.

ಅವರು ಈ ದೇಶಕ್ಕೆ ಒಂದು ಮಾದರಿ ಸಂವಿಧಾನ ರೂಪಿಸಿದವರು. ಹಿಂದುಳಿದ, ಅಲ್ಪಸಂಖ್ಯಾತರ ಧ್ವನಿಯಾದವರು. ಅವರ ಬಗ್ಗೆ ಇಷ್ಟು ಕೀಳು ಭಾವನೆ ಇಟ್ಟುಕೊಳ್ಳುವುದು ಈ ದೇಶದ ಗೃಹ ಸಚಿವರಿಗೆಶೋಭೆ ತರುವುದಿಲ್ಲ ಎಂದರು.

ಬಾಬಾ ಸಾಹೇಬ್ ಹೆಸರನ್ನು ಕೇಳಲು ಕೋಮುವ್ಯಸನಿಗಳಿಗೆ ಕರ್ಕಶವಾಗಬಹುದು. ಆದರೆ ಇಲ್ಲಿನ ದಲಿತರ, ಹಿಂದುಳಿದವರ, ದುರ್ಬಲರ ಹಕ್ಕುಗಳಿಗೆ ಹೋರಾಡಿದ ಮಹನೀಯರಾದ ಅಂಬೇಡ್ಕರ್‌ರ ಸೇವೆ ಸ್ಮರಣೀಯ. ಆ ಹೆಸರು ನಾವು ಎಂದಿಗೂ ಸ್ಮರಿಸಿ ಹೇಳುತ್ತಿರುವುದು ನಿಮಗೆ ವ್ಯಸನದಂತೆ ಕಂಡರೆ ಅದು ನಿಮ್ಮ ಮಾನಸಿಕ ಸಮಸ್ಯೆಯಾಗಿದೆ. ಡಾ. ಅಂಬೇಡ್ಕರರಂತಹ ಮಹಾನ್ ವ್ಯಕ್ತಿಯನ್ನು ನಿಂದಿಸುವ ಮೂಲಕ ಇಡೀ ದೇಶದ ನಾಗರಿಕರ ಮನಸಿಗೆ ಘಾಸಿಯುಂಟು ಮಾಡಿರುವ ಗೃಹ ಮಂತ್ರಿಗಳು ಕೂಡಲೇ ಕ್ಷಮೆಯಾಚನೆ ಮಾಡಬೇಕು ಎಂದು ಆಗ್ರಹಿಸಿದರು.

# ಅಮಿತ್ ಶಾರನ್ನು ಕೂಡಲೇ ವಜಾಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕೇಂದ್ರದ ಗೃಹ ಮಂತ್ರಿಗಳು ತಾವು ಎಂತಹ ಅಪರಾಧದ ಹಿನ್ನೆಲೆಯಿಂದ ಬಂದಿದ್ದಾರೆ ಎಂಬುದು ಜಗತ್ತಿಗೆ ಗೊತ್ತಿದೆ. ಇನ್ನು ರಾಜ್ಯದ ಸಿ.ಟಿ ರವಿಯವರ ವರ್ತನೆಯೂ ಜಗತ್ತಿಗೆ ಗೊತ್ತಿರುವ ವಿಷಯ. ಇವರ ಅಧಿಕಾರದ ಲಾಲಸೆಗೆ ಈ ರೀತಿಯ ಮಾತುಗಳು ಬರುತ್ತಿವೆ ಎಂದು ಕಾಂಗ್ರೆಸ್ ಮುಖಂಡರು, ಗ್ಯಾರಂಟಿ ಸಮಿತಿ ಸದಸ್ಯರಾದ ಜ್ಯೋತಿ ಎಂ.ಗೊಂಡಬಾಳ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ದೇಶದ ಸಂವಿಧಾನವನ್ನು ರಚಿಸಿ ಸರ್ವರಿಗೂ ಬದುಕುವ ಹಕ್ಕು ಕೊಟ್ಟ ಧೀಮಂತ ನಾಯಕ



ಬಾಬಾಸಾಹೇಬರ ಹೆಸರನ್ನು ಹೇಳಿದರೆ ಗೃಹ ಮಂತ್ರಿಗಳಿಗೆ ಶೋಕಿ ಅನಿಸುತ್ತಿದೆ. ತಾವು ಶೋಕಿಗಾಗಿ ಶ್ರೀರಾಮನ ಹೆಸರನ್ನು, ಪರಮ ಭಕ್ತ ಹನುಮನ ಹೆಸರನ್ನು ಹೇಳಿಕೊಂಡು ತಿರುಗಿದಂತೆ ಭಾವಿಸಿರುವ ಅಮಿತ್ ಶಾ ಅವರನ್ನು ಕೂಡಲೇ ಸರಕಾರ ವಜಾಗೊಳಿಸಬೇಕು ಎಂದು ಕಿಡಿಕಾರಿದ್ದಾರೆ.

ಇನ್ನು, ರಾಜ್ಯದ ವಿ.ಪ ಸದಸ್ಯ ಸಿ.ಟಿ ರವಿ ಹಗಲಲ್ಲೂ ನಶೆಯಲ್ಲಿ ಇದ್ದ ರೀತಿ ಮಾತನಾಡಿ, ಹೆಣ್ಣುಮಗಳ ಬಗ್ಗೆ ಅತ್ಯಂತ ವಿಷಾದಕರ ಮಾತನ್ನು ಆಡಿದ್ದು, ಅಲ್ಲದೇ ಬಿಜೆಪಿ ಮುಖಂಡರು ಸಿಟಿ ರವಿ ಪರವಾಗಿ ಬೀದಿಗಳಿದು ಪ್ರತಿಭಟನೆ ಮಾಡುತ್ತಾರೆ ಅಂದರೆ ಅವರಿಗೆ ಸಂವಿಧಾನದ ಬಗ್ಗೆ, ಹೆಣ್ಣುಮಕ್ಕಳ ಬಗ್ಗೆ ಮತ್ತು ಶೋಷಿತರ ಪರವಾಗಿ ಇರುವ ಸರಕಾರಗಳ ಬಗ್ಗೆ ಇರುವ ಅಸಹನೀಯತೆಯಿಂದ ಈ ರೀತಿಯ ಹೇಳಿಕೆಗಳು ಮತ್ತು ಮಾತುಗಳು ಬರುತ್ತವೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ಜನರಿಗೆ ಉತ್ತಮ ಆರೋಗ್ಯ ಸೇವೆ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವಜನಿಕರಿಗೆ ಒಳ್ಳೆಯ ರೀತಿಲ್ಲಿ ಆರೋಗ್ಯ ಜಾಗೃತಿ ಮತ್ತು ಆರೋಗ್ಯ ಇಲಾಖೆಯ ಸೇವೆಗಳನ್ನು ನೀಡಿ ಸಮುದಾಯದಲ್ಲಿ ತಮ್ಮ ಘನತೆಯನ್ನು ಹೆಚ್ಚಿಸಿಕೊಳ್ಳುವುದರ ಜೊತೆಗೆ ನೌಕರರ ಸಂಘದಿಂದ ಆರೋಗ್ಯ ಇಲಾಖೆಯ ನೌಕರರ ಮತ್ತು ಅಧಿಕಾರಿಗಳ ಕುಂದು-ಕೊರತೆ ನಿವಾರಣೆಗೆ ಸಮನ್ವಯತೆಯಿಂದ ಸ್ಪಂದಿಸಿ ಸಮಸ್ಯೆಗಳನ್ನ ಪರಿಹರಿಕೊಳ್ಳುವಲ್ಲಿ ಎಲ್ಲ ಸಂಘಟಕರು ಪ್ರಯತ್ನಶೀಲರಾಗಬೇಕೆಂದು ಡಾ.ವೆಂಕಟೇಶ ರಾಠೋಡ ಹೇಳಿದರು.



ಅವರು ಕರ್ನಾಟಕ ರಾಜ್ಯ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಗದಗ ಜಿಲ್ಲಾ ಘಟಕ ಮತ್ತು ಜಿಲ್ಲಾ ಸಮೀಕ್ಷಾ ಘಟಕದಿಂದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಗದಗ ಜಿಲ್ಲಾ ಘಟಕಕ್ಕೆ ಜಿಲ್ಲಾ ಕಾರ್ಯಾಧ್ಯಕ್ಷರಾಗಿ ಆಯ್ಕೆಯಾದ ಸಿದ್ದಪ್ಪ ಎನ್.ಲಿಂಗದಾಳ ಹಾಗೂ ನಿರ್ದೇಶಕರಿಗೆ ಏರ್ಪಡಿಸಿದ್ದ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ನೌಕರರ ಸಂಘಟನೆಯ ಪಧಾಧಿಕಾರಿಗಳು ನೌಕರರ ಬೇಡಿಕೆಗಳ ಬಗ್ಗೆ ಹೆಚ್ಚು ಕ್ರಿಯಾಶೀಲರಾಗಿ ಹೋರಾಟಗಳನ್ನು ಮಾಡುತ್ತಿರುವುದು ಶ್ಲಾಘನೀಯ. ಲಿಂಗದಾಳರು ಆರೋಗ್ಯ ಇಲಾಖೆಯ ಆರೋಗ್ಯ ಸಹಾಯಕರ ನೌಕರರ ಸಂಘವನ್ನು ಕಟ್ಟುವಲ್ಲಿ ಪರಿಶ್ರಮ ವಹಿಸಿದ್ದಾರೆ ಎಂದು ಹೇಳಿದರು.

ಸಿದ್ದಪ್ಪ ಲಿಂಗದಾಳ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಆರೋಗ್ಯ ನಿರೀಕ್ಷಣಾದಿಕಾರಿಗಳ ಸಂಘದ ಜಿಲ್ಲಾ ಅಧ್ಯಕ್ಷರಾದ ಬಿ.ಸಿ. ಹಿರೇಹಾಳ ಮಾತನಾಡಿ, ನೌಕರರು ಸಂಘಟನೆಗೆ ಬೆನ್ನೆಲುಬಾಗಿ ಪ್ರೋತ್ಸಾಹಿಸಬೇಕು. ನಿಮ್ಮೆಲ್ಲರ ಪ್ರತಿನಿಧಿಯಾಗಿ ನಿಮ್ಮ ಸಮಸ್ಯೆಗಳನ್ನು ಬಗೆಹರಿಸುವ ಮತ್ತು ನಿಮ್ಮ ನೋವು-ನಲಿವುಗಳಿಗೆ ಕಾರ್ಯವನ್ನು ಮಾಡುತ್ತಿದ್ದೇವೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕ ಅಜಯಕುಮಾರ ಕಲಾಲ, ಕೆ.ಎ. ಬೂದಿಹಾಳ ಮಾತನಾಡಿದರು. ವಾಯ್.ಎನ್. ಕಡೆಮನಿ, ಸರೋಜ ಎಸ್.ಕಟ್ಟಿಮನಿ, ಏಕನಾಥಗೌಡ ಪಾಟೀಲ, ಡಾ. ರವಿ ಕಡಗಾವಿ, ಗೋಪಾಲ ಸೂರಪೂರ, ಕೆ.ವಿ. ಬಡಿಗೇರ ಮುಂತಾದವರು ಉಪಸ್ಥಿತರಿದ್ದರು.

ಮಂಜುನಾಥ ಸಜ್ಜನ ಪ್ರಾರ್ಥಿಸಿದರು. ಬಸವರಾಜ ಸೋಮಗೊಂಡ ಸ್ವಾಗತಿಸಿದರು. ಏಕನಾಥಗೌಡ ಪಾಟೀಲ ನಿರೂಪಿಸಿದರು.

# ನಿಧನ

## ಶಕುಂತಲಾ ಜಯಪ್ರಕಾಶ ಕೊಳ್ಳಿ



ಗದಗ: ಬೆಟಗೇರಿಯ ಎಡೆಯೂರ ಸಿದ್ಧಲಿಂಗೇಶ್ವರ ನಗರದ ಗಾರ್ಗಿ ಪೇಟೆಯ ನಿವಾಸಿ ಶಕುಂತಲಾ ಜಯಪ್ರಕಾಶ ಕೊಳ್ಳಿ (72) ಇವರು ಡಿ. 20ರ ಮುಂಜಾನೆ ನಿಧನರಾದರು. ಇವರ ಅಂತಿಮ ಯಾತ್ರೆಯು ಸಂಜೆ 6 ಗಂಟೆಗೆ ಮೃತರ ಸ್ವಗೃಹದಿಂದ ತೆರಳಿತು.

# ಕ್ರಿಸ್‌ಮಸ್ ಹಬ್ಬದ ಹಿನ್ನೆಲೆ: ಹೆಚ್ಚುವರಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024ನೇ ಸಾಲಿನ ಕ್ರಿಸ್‌ಮಸ್ ಹಬ್ಬದ ಪ್ರಯುಕ್ತ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ, ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 125 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಡಿಸೆಂಬರ್ 21 ಹಾಗೂ 22 ರಂದು ವಾರಾಂತ್ಯ ದಿನಗಳಾದ ಶನಿವಾರ ಹಾಗೂ ರವಿವಾರ ಇದ್ದು, ಡಿಸೆಂಬರ್ 25 ಬುಧವಾರ ದಂದು ಕ್ರಿಸ್‌ಮಸ್ ಹಬ್ಬವಿರುವುದರಿಂದ ಬೆಂಗಳೂರು ಮತ್ತು ಇತರೆ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು.

ಬೆಂಗಳೂರಿನಿಂದ ರಾಜ್ಯ/ ಅಂತರ ರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಡಿಸೆಂಬರ್ 20 ಹಾಗೂ 21 ಮತ್ತು 24 ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹಬ್ಬ ಮುಗಿದ ಮೇಲೆ ಡಿಸೆಂಬರ್ 25 ಹಾಗೂ 26 ರಂದು ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು.

ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

## ‘ವಿಶ್ವ ಧ್ಯಾನ ದಿನಾಚರಣೆ’ ಇಂದು



■ ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಹಾಗೂ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಮತ್ತು ಬಸವ ಯೋಗ ಚಿಂತನ ಕೂಟ ಗದಗ ಇವರುಗಳ ಸಹಯೋಗದಲ್ಲಿ ಡಿ. 21ರಂದು ಬೆಳಿಗ್ಗೆ 6-30 ಗಂಟೆಗೆ ಸಿದ್ಧಲಿಂಗ ನಗರದಲ್ಲಿನ ಬಸವಯೋಗ ಮಂದಿರ (ಬಸವ ಪ್ರಭೆ ಕ್ಯಾಂಪಸ್)ನಲ್ಲಿ ಪ್ರಥಮ ವಿಶ್ವ ಧ್ಯಾನ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಧ್ಯಾನ ಕುರಿತು ಉಪನ್ಯಾಸ ಮತ್ತು ವಿಶೇಷವಾಗಿ ‘ವಿಶ್ವ ಧ್ಯಾನ ದಿನ’ ಧ್ಯೇಯ ಮೇರೆಗೆ ಆಂತರಿಕ ಶಾಂತಿ, ಜಾಗತಿಕ ಸಾಮರಸ್ಯಕ್ಕಾಗಿ ಸಾಮೂಹಿಕ ಧ್ಯಾನ ಸಾಧನೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುವವು.

ವಿಶ್ವ ಮನುಕುಲದ ಒಳಿತಿಗಾಗಿ ನಡೆಯಲಿರುವ "ವಿಶ್ವ ಧ್ಯಾನ ದಿನಾಚರಣೆ ಕಾರ್ಯಕ್ರಮದಲ್ಲಿ ಧ್ಯಾನ ಸಾಧಕರು, ಆಧ್ಯಾತ್ಮ ಪ್ರಿಯರು, ಯೋಗ ಸಾಧಕರು, ಅಭಿಮಾನಿಗಳು, ಸಮಾಜ ಚಿಂತಕರು, ಯುವಜನಾಂಗ, ಮಕ್ಕಳು, ಮಹಿಳೆಯರೆಲ್ಲರೂ ಭಾಗವಹಿಸಲು ಸಂಘಟಿಕರ ಪರವಾಗಿ ಬಸವ ಯೋಗ ಮಹಾವಿದ್ಯಾಲಯದ ಪ್ರಾಂಶುಪಾಲ ಕೆ. ಎಸ್. ಪಲ್ಲೇದ ವಿನಂತಿಸಿರುವರು.

### ಸಕ್ಕರೆ ನಾಡು ಮಂಡ್ಯದಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿದ ಸಿಎಂ ಸಿದ್ದರಾಮಯ್ಯ

## ಮಾತೃಭಾಷೆಯೇ ಹೃದಯದ ಭಾಷೆಯಾಗಿರಲಿ

■ ವಿಜಯಸಾಕ್ಷಿ ಸುದ್ದಿ, ಮಂಡ್ಯ

ಸಾಹಿತ್ಯ ಕ್ಷೇತ್ರಕ್ಕೆ ಮಂಡ್ಯ ಜಿಲ್ಲೆಯ ಕೊಡುಗೆ ಉತ್ಕೃಷ್ಟವಾದದ್ದು. ಕನ್ನಡಕ್ಕೆ ಮೊದಲ ಪ್ರಾಶಸ್ತ್ಯ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ. ಸಮಗ್ರ ಕನ್ನಡ ಭಾಷಾ ಬಳಕೆಯನ್ನು ಜಾರಿಗೆ ತಂದಿದ್ದೇವೆ. ಕನ್ನಡ ಸಂಕಷ್ಟದಲ್ಲಿದೆ ಎಂಬುದಕ್ಕೆ ಕಾರಣ ತಿಳಿದುಕೊಳ್ಳಬೇಕಿದೆ. ಎಷ್ಟೇ ಭಾಷೆ ಕಲಿತರೂ ಹೃದಯದ ಭಾಷೆ ಮಾತೃ ಭಾಷೆಯೇ ಆಗಿರುತ್ತದೆ. ಯಾವ ಸಂಪ್ರದಾಯವೂ ಇಕ್ಕಟ್ಟಿಗೆ ಸಿಲುಕಬಾರದು ಎಂಬುದು ನಮ್ಮ ಆಶಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಸಕ್ಕರೆ ನಾಡು ಮಂಡ್ಯದಲ್ಲಿ ಶುಕ್ರವಾರದಿಂದ ಮೂರು ದಿನಗಳ ಕಾಲ ನಡೆಯಲಿರುವ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯನ್ನು ಕೊಂಡಾಡಿದರು.

ಮೂರು ದಶಕಗಳ ಹಿಂದೆ ಸಾಹಿತಿ ಚದುರಂಗ ಅವರ ಅಧ್ಯಕ್ಷತೆಯಲ್ಲಿ 63ನೇ ಸಾಹಿತ್ಯ ಸಮ್ಮೇಳನ ಮಂಡ್ಯದಲ್ಲಿ ನಡೆದಿತ್ತು. ಆಗ ಕನ್ನಡ ಸಾಹಿತ್ಯ ಪರಿಷತ್‌ನ ರಾಜ್ಯಾಧ್ಯಕ್ಷರಾಗಿದ್ದ ಡಾ. ಗೊ.ರು ಚನ್ನಬಸಪ್ಪನವರು ಸಮ್ಮೇಳನವನ್ನು ಯಶಸ್ವಿಯಾಗಿ ನಿರ್ವಹಿಸಿದ್ದರು. 30 ವರ್ಷಗಳ ನಂತರ ಈಗ ನಡೆಯುತ್ತಿರುವ 87ನೇ ಸಮ್ಮೇಳನದ ಅಧ್ಯಕ್ಷರೂ ಚನ್ನಬಸಪ್ಪನವರೇ ಆಗಿರುವುದು ಕನ್ನಡದ ಗೌರವವನ್ನು ಹೆಚ್ಚಿಸಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಿರುವ ಹಿರಿಯ ಸಾಹಿತಿ ನಾಡೋಜ ಡಾ. ಗೊ.ರು. ಚನ್ನಬಸಪ್ಪ ಅಧ್ಯಕ್ಷೀಯ ನುಡಿಗಳನ್ನಾಡಿ, ಯಾವುದೇ ಕಾರಣಕ್ಕೂ ಪ್ರಾದೇಶಿಕ ಭಾಷೆಗಳ ಮೇಲೆ ಹಿಂದಿ ಹೇರಿಕೆಗೆ ಅವಕಾಶ ಕೊಡಬಾರದು ಎಂದರಲ್ಲದೆ, ಭಾಷೆ ಎದುರಿಸುತ್ತಿರುವ ಬಿಕ್ಕಟ್ಟುಗಳು, ಅಂತರರಾಜ್ಯ ಭಾಷಾ ವಿನಿಮಯ, ತಂತ್ರಜ್ಞಾನದ ಅವಲಂಬನೆ, ಗಡಿನಾಡ ಕನ್ನಡಿಗರ ಬವಣೆ ಇತ್ಯಾದಿ 21 ಹಕ್ಕೊತ್ತಾಯಗಳ ಮೂಲಕ ಗಮನಸೆಳೆದರು.

ಆದಿಚುಂಚನಗಿರಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿದ್ದರು. ಸಮ್ಮೇಳನಾಧ್ಯಕ್ಷ ನಾಡೋಜ ಡಾ. ಗೊ.ರು.ಚನ್ನಬಸಪ್ಪ ಅವರೊಂದಿಗೆ ಹಿರಿಯ ಸಾಹಿತಿಗಳಾದ ಡಾ. ದೊಡ್ಡರಂಗೇಗೌಡ, ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರಾದ ಡಾ. ಚಂದ್ರಶೇಖರ ಕಂಬಾರ ಸೇರಿದಂತೆ ಸಾಹಿತಿಗಳು, ಗಣ್ಯರು ವೇದಿಕೆಯ ಮೇಲೆ ಇದ್ದರು.



87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾದ ಡಾ. ಗೊ.ರು ಚನ್ನಬಸಪ್ಪ ಅವರ ಮೆರವಣಿಗೆಗೆ ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ ನಗಾರಿ ಬಾರಿಸುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ, ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ, ದಿನೇಶ್ ಗೂಳಿಗೌಡ, ಡಿಸಿ ಡಾ.ಕುಮಾರ್ ಮುಂತಾದವರು ಉಪಸ್ಥಿತರಿದ್ದರು.

ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ರಾಷ್ಟ್ರಧ್ವಜವನ್ನು, ಕ.ಸಾ.ಪ ರಾಜ್ಯಾಧ್ಯಕ್ಷ ನಾಡೋಜ ಡಾ. ಮಹೇಶ್ ಜೋಷಿ ಕನ್ನಡ ಸಾಹಿತ್ಯ ಪರಿಷತ್ತು ಧ್ವಜವನ್ನು, ಪರಿಷತ್ತಿನ ಜಿಲ್ಲಾ ಸಂಚಾಲಕಿ ಡಾ. ಮೀರಾ ಶಿವಲಿಂಗಯ್ಯ ನಾಡ ಧ್ವಜಾರೋಹಣ ನೆರವೇರಿಸಿದರು.

### ಬಿ.ಡಿ. ತಟ್ಟಿ(ಅ)ಶ್ರವಣನ್ಯೂನ್ಯತೆಯುಳ್ಳ ಮಕ್ಕಳ ಶಾಲೆಯಲ್ಲಿ ವಿಶೇಷ ಕಾರ್ಯಕ್ರಮ

## ವಿಶೇಷ ಚೇತನ ಮಕ್ಕಳಿಗೂ ಅವಕಾಶಗಳು ದೊರೆಯಲಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದಲ್ಲಿನ ವಿಶೇಷ ಚೇತನ ಮಕ್ಕಳನ್ನು ಗುರುತಿಸಿ ಅವರಿಗೂ ಸಾಮಾನ್ಯ ಮಕ್ಕಳಿಗೆ ದೊರೆಯುವ ಸೌಲಭ್ಯಗಳನ್ನು ಒದಗಿಸಿದಾಗ ಅವರು ಎಲ್ಲರಂತೆ ಸರ್ವ ರಂಗಗಳಲ್ಲಿಯೂ ಪ್ರಗತಿ ಸಾಧಿಸಬಲ್ಲರು ಎಂದು ಕ್ಷೇತ್ರ ಸಮನ್ವಯಾಧಿಕಾರಿ ಬಿ.ಎಸ್. ಭಜಂತ್ರಿ ಹೇಳಿದರು.

ಅವರು ಶುಕ್ರವಾರ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಕ್ಷೇತ್ರ ಸಂಪನ್ಮೂಲ ಕೇಂದ್ರ ಶಿರಹಟ್ಟಿ ಕಾರ್ಯಾಲಯದ ವತಿಯಿಂದ ಬಿ.ಡಿ. ತಟ್ಟಿ(ಅ) ಶ್ರವಣನ್ಯೂನ್ಯತೆಯುಳ್ಳ ಮಕ್ಕಳ ಶಾಲೆಯಲ್ಲಿ ನಡೆದ ವಿಶೇಷ ಚೇತನರ ಜಾಗೃತಿ, ಅರಿವು ಮೂಡಿಸುವ ಹಾಗೂ ಪರಿಸರ ನಿರ್ಮಾಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣ ಪಡೆಯುತ್ತಿರುವ ವಿಶೇಷ ಚೇತನ ಮಕ್ಕಳಿಗೆ ಸರಕಾರದಿಂದ ಸಾಕಷ್ಟು ಸೌಲಭ್ಯಗಳು ದೊರೆಯುತ್ತವೆ. ಅವೆಲ್ಲವುಗಳನ್ನೂ ಪಡೆಯಲು ವಿಕಲತೆಯ ಗುರುತಿನ ಕಾರ್ಡ್ ಮಾಡಿಸುವುದು ಅತ್ಯವಶ್ಯಕ. ಜೊತೆಗೆ ಪಾಲಕರು ಮತ್ತು ಸಮಾಜ ಇಂತಹ ಮಕ್ಕಳಿಗೆ ವಿಶೇಷ ಕಾಳಜಿ ತೋರಿಸಿ, ಗೌರವದಿಂದ ಕಂಡು, ಅವಕಾಶ ಕೊಡುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ 21 ವಿಕಲತೆಗಳ ಮಾಹಿತಿ ತಿಳಿಸುವ ಪೋಸ್ಟರ್ ಹಾಗೂ ಸರಕಾರದ ಸೌಲಭ್ಯಗಳ ಮಾಹಿತಿ ತಿಳಿಸುವ ಕರಪತ್ರಗಳನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಗೌ.ಕಾರ್ಯದರ್ಶಿ ಸೋಮನಾಥ ಮಹಾಜನಶೆಟ್ಟರ ವಹಿಸಿದ್ದರು. ಅತಿಥಿಗಳಾಗಿ ಸಂಸ್ಥೆಯ ಆಡಳಿತಾಧಿಕಾರಿ ಬಿ.ಬಿ. ಹುಬ್ಬಳ್ಳಿ, ಮುಖ್ಯೋಪಾಧ್ಯಾಯೆ ಜಯಶ್ರೀ ಶೆಟ್ಟರ, ಶಿಕ್ಷಕ ಜಿ.ಪಿ. ಪವಾರ, ಪ್ರತಿಮಾ ಮಹಾಜನಶೆಟ್ಟರ, ಎನ್.ಆರ್. ಸಾಥಪುತೆ, ಸಿ.ಆರ್.ಪಿಗಳಾದ ಉಮೇಶ ನೇಕಾರ, ಮುಲ್ಲಾನವರ, ಎಂ.ಆರ್.ಡಬ್ಲ್ಯು ಭಾರತಿ ಉಪಸ್ಥಿತರಿದ್ದರು.

ಂುಎ. ಆರ್. ಡಬ್ಲ್ಯು ಮಂಜುನಾಥ ರಾಮಗಿರಿ, ಬಿ.ಐ.ಈ.ಆರ್.ಟಿಗಳಾದ ಕಲ್ಲಪ್ಪ ಬೇವೂರ, ಎಸ್.ವಿ. ಕೋತಬಾಳ, ಶ್ರೀಶೈಲ ಪೂಜಾರಿ ಹಾಗೂ ಶಾಲೆಯ ಸರ್ವ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಕಾರ್ಯಕ್ರಮದಲ್ಲಿ ಬಿ.ಐ.ಈ.ಆರ್.ಟಿ. ನಾಗರಾಜ ಮಜ್ಜಿಗುಡ್ಡ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಾಲಾ ಸಿಬ್ಬಂದಿಗಳಾದ ಸಂಗೀತಾ ವಾಲಿ ಪ್ರಾರ್ಥಿಸಿದರು, ಗೀತಾ ಕೋಡ್ಲಿ ಸ್ವಾಗತಿಸಿದರು, ವಿಜಯಲಕ್ಷ್ಮೀ ಮುಧೋಳ ಕಾರ್ಯಕ್ರಮ ನಿರೂಪಣೆ ಮಾಡಿದರು. ನಿಂಗಪ್ಪ ರೋಣದ ವಂದಿಸಿದರು.

## ಜಾತ್ರಾ ಮಹೋತ್ಸವ ಪದಾಧಿಕಾರಿಗಳ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಶರಣ ಸಂಸ್ಕೃತಿಯ ಪಾವನ ತಾಣ ಮುಳಗುಂದ ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ 2025/26ನೇ ಸಾಲಿನ ಫೆಬ್ರುವರಿ ತಿಂಗಳಲ್ಲಿ ಜರಗುವ ಜಾತ್ರಾ ಮಹೋತ್ಸವದ ನೂತನ ಅಧ್ಯಕ್ಷರಾಗಿ ಕೆ.ಎಲ್. ಕರಿಗೌಡ್ರ, ಉಪಾಧ್ಯಕ್ಷರಾಗಿ ಸಿದ್ದಲಿಂಗೇಶ ಕುರ್ತಕೋಟಿ ಹಾಗೂ ಹೊನ್ನಪ್ಪ ನೀಲಗುಂದ, ಕಾರ್ಯದರ್ಶಿಯಾಗಿ ಶಿವಬಸವ ಹಸಬಿ, ಖಜಾಂಚಿಯಾಗಿ ಅಶೋಕ ಮೆಣಸಿನಕಾಯಿ ಆಯ್ಕೆಯನ್ನು ಗವಿಮಠದ ಡಾ.ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ನೇತೃತ್ವದಲ್ಲಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಬಾಲಲೀಲಾ ಸೇವಾ ಸಮಿತಿ ಅಧ್ಯಕ್ಷ ಎಂ.ಡಿ. ಬಟ್ಟೂರ, ಶಿವಣ್ಣಾ ನೀಲಗುಂದ, ಬಸವರಾಜ ವಾಲಿ, ಅಶೋಕ ಸೋನಗೋಜಿ, ಬಸವರಾಜ ಬಾತಾಖಾನಿ, ಡಾ. ಎಸ್.ಸಿ. ಚವಡಿ, ಬಸವರಾಜ ಸುಂಕಾಪೂರ, ಪಿ.ಎಸ್. ಮರಿದೇವರಮಠ, ಎಸ್.ಸಿ. ಬಡ್ನಿ, ಫಕ್ಕೀರಯ್ಯ ಅಮೋಘಿಮಠ, ಎಸ್.ಎಂ. ಉಜ್ಜಣ್ಣವರ, ಸಂಜಯ ನೀಲಗುಂದ, ವಿಜಯ ನೀಲಗುಂದ, ಬಸವರಾಜ ಬಡ್ನಿ ಬಾಲಲೀಲಾ ಮಾಹಾಂತ ಶಿವಯೋಗಿ ಸದ್ಭಕ್ತ ಮಂಡಳಿಯವರು ಇದ್ದರು.

## ಬಾಲಮಂದಿರದ ಮಕ್ಕಳಿಗೆ ಚಿತ್ರಕಲೆಯಲ್ಲಿ ಪ್ರಶಸ್ತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚಿಗೆ ಯು.ಎಸ್. ಆರ್ಟ್ ಗ್ಯಾಲರಿ ಅಸ್ಸಾಂ ವತಿಯಿಂದ ಪಂಡಿತ್ ಜವಾಹರಲಾಲ್ ನೆಹರು ಅವರ ಜನ್ಮೋತ್ಸವದ ಅಂಗವಾಗಿ ಜರುಗಿದ ಅಂತಾರಾಷ್ಟ್ರೀಯ ಚಿಲ್ಡ್ರನ್ ಆರ್ಟ್ ಸ್ಪರ್ಧೆಯಲ್ಲಿ ಸರ್ಕಾರಿ ಬಾಲಕರ ಬಾಲಮಂದಿರದ 10 ವಿದ್ಯಾರ್ಥಿಗಳು ಭಾಗವಹಿಸಿ, ಮೂವರು ವಿದ್ಯಾರ್ಥಿಗಳು ಟಾಪ್‌ಟೆನ್‌ನಲ್ಲಿ ಆಯ್ಕೆಯಾಗಿ ಪ್ರಶಸ್ತಿಯನ್ನು ಪಡೆದಿದ್ದಾರೆ.

ಪ್ರಾಥಮಿಕ ವಿಭಾಗದಲ್ಲಿ ಕಿರಣ್ ಚವಳಿಮಠ ಹಾಗೂ ಮಲ್ಲಿಕಾರ್ಜುನ್ ಹೂಗಾರ, ಪ್ರೌಢಶಾಲೆ ವಿಭಾಗದಲ್ಲಿ ಕಾರ್ತಿಕ ಬಂಡಾ ಭಾಗವಹಿಸಿ ಚಾರ್ಕೋಲ್ ಮಾಧ್ಯಮದಿಂದ ಪಂಡಿತ್. ಜವಾಹರಲಾಲ್ ನೆಹರು ಅವರ ಭಾವಚಿತ್ರದ ವಿಷಯ ಪೂರಕ ಚಿತ್ರವನ್ನು ರಚಿಸಿ ಪ್ರಶಸ್ತಿಯನ್ನು ಪಡೆದಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ಹಾಗೂ ತರಬೇತಿ ನೀಡಿದ ಕಲಾವಿದ ಡಾ. ಜಾಕೀರಹುಸೇನ ಎಂ. ಕೊರ್ಲಹಳ್ಳಿ ಅವರಿಗೆ ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿಗಳಾದ ರಫೀಕಾ ಹಳ್ಳೂರ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಜಯದೇವಿ ಎ.ಕವಲೂರ, ಸದಸ್ಯರಾದ ದೇವಪ್ಪ ಈರಗಾರ, ಸುಪರ್ಣ ಆರ್.ಬ್ಯಾಹಟ್ಟಿ, ಬಸವರಾಜ ಎನ್.ಸಂಶಿ, ಸರಕಾರಿ ಬಾಲಕರ ಬಾಲಮಂದಿರದ ಅಧೀಕ್ಷಕರಾದ ಗಿರಿಜಾ ದೊಡ್ಡಮನಿ, ವಿಜಯಲಕ್ಷ್ಮೀ ವಾಲಿ, ಗೋದಾವರಿ ಮುಳಗುಂದ, ಸಿಸ್ಟರ್ ಪ್ರೇಸಿಲ್ಲಾ (ಂುಎ.ಎನ್.ಐ.ಸಿ.ಇ.ಎಫ್. ಸಪೋರ್ಟ್ ಪರ್ಸನ್) ಅನುಪಮಾ ಹಿರೇಗೌಡ್ರ, ಪ್ರಕಾಶ ಗಾಣಿಗೇರ, ಗೃಹಪಾಲಕರಾದ ಪ್ರವೀಣ್, ಮೈಲಾರಿ ನೀಲಗುಂದ, ಪ್ರಭಾವತಿ ಮತ್ತು ಸರ್ಕಾರಿ ಬಾಲಕಿಯರ ಬಾಲಮಂದಿರದ ಅಧೀಕ್ಷಕರಾದ ಲಕ್ಷ್ಮೀ ಬಾಗೇವಾಡಿ, ಸಿಬ್ಬಂದಿ ವರ್ಗದವರು, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ವರ್ಗದವರು, ಸರ್ಕಾರಿ ಬಾಲಕರ ಬಾಲಮಂದಿರದ ಎಲ್ಲಾ ಸಿಬ್ಬಂದಿ ವರ್ಗದವರು ಹಾರ್ದಿಕವಾಗಿ ಅಭಿನಂದಿಸಿದ್ದಾರೆ.




ಬೆಳಗಾವಿಯ ಕೆ.ಎಲ್.ಇ ಮೆಡಿಕಲ್ ಕಾಲೇಜಿನಲ್ಲಿ ಜರುಗಿದ ಖಾಸಗಿ ಅನುದಾನಿತ ಶಾಲಾ ಕಾಲೇಜುಗಳ ಒಕ್ಕೂಟದ ಸಭೆಯಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಇಲಾಖೆ ಸಚಿವರಾದ ಮಧು ಬಂಗಾರಪ್ಪ ಹಾಗೂ ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ ಅವರನ್ನು ಒಕ್ಕೂಟದ ಪರವಾಗಿ ಮಾಜಿ ಸಚಿವ ಎಸ್.ಎಸ್. ಪಾಟೀಲ್ ಸನ್ಮಾನಿಸಿದರು. ಈ ಸಂದರ್ಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ,

## ವಿವಿಧ ತಾಲೂಕುಗಳ ಮರಳು ಉಸ್ತುವಾರಿ ಸಮಿತಿ ಸಭೆ




■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ತಾಲೂಕು ಆಡಳಿತ ಸೌಧದಲ್ಲಿ ತಹಸೀಲ್ದಾರ ಕಚೇರಿ ಸಭಾಂಗಣದಲ್ಲಿ ಹುಬ್ಬಳ್ಳಿ (ಗ್ರಾಮೀಣ), ಹುಬ್ಬಳ್ಳಿ (ಶಹರ), ಅಣ್ಣಿಗೇರಿ ಮತ್ತು ಕುಂದಗೋಳ ತಾಲೂಕು ಮರಳು ಉಸ್ತುವಾರಿ ಸಮಿತಿಯ ಸಭೆ ಶುಕ್ರವಾರ ನಡೆಯಿತು.

ಕರ್ನಾಟಕ ಉಪ ಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2023ರ ನಿಯಮ 31(ಖ)ರಲ್ಲಿ ತಿಳಿಸಿರುವಂತೆ ತಾಲೂಕು ಮರಳು ಸಮಿತಿಯ ಕಾರ್ಯ ವ್ಯಾಪ್ತಿಯ ಕಾರ್ಯಗಳು, ಹುಬ್ಬಳ್ಳಿ-ಧಾರವಾಡ ಮಹಾ ನಗರಗಳಲ್ಲಿ ಅನಧಿಕೃತ ಮರಳು ದಾಸ್ತಾನು ವಿಲೇವಾರಿ, ನೆರೆ ಜಿಲ್ಲೆಗಳಿಂದ ಮರಳು ಸಾಗಾಣಿಕೆ ಕುರಿತು ವಿತರಿಸುತ್ತಿರುವ ಪರವಾನಿಗೆಗಳ ಅವಧಿ, ಮಾರ್ಗ ಮತ್ತು ತಲುಪಬೇಕಾದ ಸ್ಥಳದ ಚರ್ಚೆ, ಮರಳು ತೊಳೆಯುವ ಅಡ್ಡೆಗಳ, ಪಟ್ಟಾ ಜಮೀನು ಸೇರಿದಂತೆ ಯಾವುದೇ ವರ್ಗದ ಭೂಮಿಯಲ್ಲಿ ಫಿಲ್ಟರ್ ಮರಳು ಗಣಿಗಾರಿಕೆ, ಉತ್ಪಾದನೆ, ದಾಸ್ತಾನು ಹಾಗೂ ಮಾರಾಟ ನಿಯಮಗಳಲ್ಲಿ ನಿಷೇಧ, ಜಿಲ್ಲೆಯಲ್ಲಿ ಯಾವುದೇ ನದಿ ಪಾತ್ರಗಳು ಇಲ್ಲದಿರುವುದರಿಂದ ಹಳ್ಳ-ಕೊಳ್ಳದಲ್ಲಿ ಲಭ್ಯವಿರುವ ಮರಳಿನ ನಿಕ್ಷೇಪಗಳನ್ನು ಗುರುತಿಸುವಿಕೆ, ಅನಧಿಕೃತ ಮರಳು ಸಾಗಾಣಿಕೆಯ ಕುರಿತು ನಿಗಾ ವಹಿಸುವ ನಿಟ್ಟಿನಲ್ಲಿ ಸದಸ್ಯ ಇಲಾಖೆಯವರು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಉಪ ವಿಭಾಗಾಧಿಕಾರಿ ಶಾಲಂ ಹುಸೇನ್, ತಹಸೀಲ್ದಾರರಾದ ಕಲಗೌಡ ಪಾಟೀಲ, ಜೆ.ಬಿ. ಮಜ್ಜಗಿ, ರಾಜು ಮಾವರಕರ, ಎಂ.ಜಿ. ದಾಸಪ್ಪನವರ, ಲೋಕೋಪಯೋಗಿ ಇಲಾಖೆಯ ಎಇಇ ಸುಧಾಕರ ಬಾಗೇವಾಡಿ, ಎಇ ಲಲಿತಾ ಗೌಡರ, ಪ್ರಾದೇಶಿಕ ಅರಣ್ಯಾಧಿಕಾರಿ ಆರ್.ಎಸ್. ಉಪ್ಪಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಉಪಸ್ಥಿತರಿದ್ದರು.

ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಹಳೆಯ ಕಛೇರಿ ಆವರಣದಲ್ಲಿನ (ಜಿಲ್ಲಾ ಪಂಚಾಯತ್ ಧಾರವಾಡ) ದಾಸ್ತಾನಿರುವ ಮರಳನ್ನು ವಿಲೇವಾರಿ ಹಾಗೂ ಶ್ರೀ ತುಂಗಭದ್ರ ಮರಳು ಲಾರಿ ಮಾಲೀಕರ ಸಂಘ, ಹುಬ್ಬಳ್ಳಿ ಜಿಲ್ಲೆಯಲ್ಲಿ ಮರಳು ಸಾಗಾಣಿಕೆ ವಾಹನಗಳನ್ನು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು, 2023ರ ನಿಯಮ 31-ಖಿ(11)ರ ಪ್ರಕಾರ ನಿಯಮದಲ್ಲಿರುವಂತೆ ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಅನುಮತಿ ನೀಡುವಂತೆ ಕೋರಿದ ಮನವಿ ಕುರಿತ ವಿಷಯಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು.

## ಕೃಷಿಕ ಸಮಾಜದ ಸದಸ್ಯರ ಅವಿರೋಧ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಾ ಕೃಷಿಕ ಸಮಾಜದ 2025-2030ರವರೆಗೆ ಐದುವರ್ಷಗಳ ಅವಧಿಯ ಕಾರ್ಯಕಾರಿ ಸಮಿತಿ ಚುನಾವಣೆಯಲ್ಲಿ ಅವಿರೋಧವಾಗಿ 15 ಸದಸ್ಯರು ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಯೂ ಆಗಿರುವ ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ತಿಳಿಸಿದ್ದಾರೆ.

ನಾಮಪತ್ರ ಪರಿಶೀಲನೆ ನಂತರ ಕಣದಲ್ಲಿ ಉಳಿದ ಅಭ್ಯರ್ಥಿಗಳ ಅವಿರೋಧ ಆಯ್ಕೆ ಘೋಷಿಸಲಾಯಿತು. ನಂತರ ಅವಿರೋಧವಾಗಿ ಆಯ್ಕೆಯಾದ ಸದಸ್ಯರಿಗೆ ಪ್ರಮಾಣಪತ್ರಗಳನ್ನು ನೀಡಲಾಯಿತು. 15 ಸ್ಥಾನಗಳಿಗೆ ಬಸವರಾಜೇಂದ್ರಪ್ಪ ಶಿವಪ್ಪ ಇಟಗಿ, ಶೇಖಪ್ಪ ಉರ್ಫ್ ಚಂದ್ರಶೇಖರಪ್ಪ ಫಕ್ಕೀರಪ್ಪ ಕರಿನಾಗಣ್ಣವರ, ನಿಂಗಪ್ಪ ಹೊನಕೇರಪ್ಪ ಬನ್ನಿ, ಮಹಾಂತಗೌಡ ಶೇಖರಗೌಡ ದೊಡ್ಡಗೌಡ್ರ, ಶಿದ್ದಲಿಂಗೇಶ್ವರ ಮಲ್ಲಪ್ಪ ರಗಟಿ, ವಿರುಪಾಕ್ಷಪ್ಪ ಗುಡ್ಡಪ್ಪ ಪಡಗೇರಿ, ರಮೇಶ ಬಸವರಾಜ ಉಪನಾಳ, ವಿರೇಂದ್ರ ಶಂಕರಗೌಡ ಪಾಟೀಲ, ರಾಜೀವ ಗೊಡಚಪ್ಪ ಕುಂಬಿ, ಫಕ್ಕೀರಗೌಡ ಅನಂತಗೌಡ ಪಾಟೀಲ, ಬಸವರೆಡ್ಡಿ ಚನ್ನಪ್ಪ ಹನುಮರಡ್ಡಿ, ಮಹೇಶ ಬಸೆಟ್ಟಪ್ಪ ಹೊಗೆಸೊಪ್ಪಿನ್, ಅಶೋಕ ಷಣ್ಮುಖಪ್ಪ ನೀರಾಲೋಟಿ, ಶಿವಯೋಗಿ ಸಿದ್ದಲಿಂಗಪ್ಪ ಮಾನ್ವಿ, ಬಸಪ್ಪ ಫಕ್ಕೀರಪ್ಪ ಹಂಜಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka